MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 83 | ಗುರುವಾರ : 15-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 83 | THURSDAY : 15-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಜಿಲ್ಲಾಡಳಿತದಿಂದ ಜನವರಿ 16ರಂದು ಉದ್ಯೋಗಾಕಾಂಕ್ಷಿಗಳ ನೋಂದಣಿ ಶಿಬಿರ

ಯುವಮಾರ್ಗ ಸುದ್ದಿ

**ರಾಯಚೂರು,ಜ.14**–ರಾಯಚೂರಿನ ಜಿಲ್ಲಾಡಳಿತವು ರಾಯಚೂರಿನ ಸಿಯೋಲ್ ಸಂಸ್ಥೆಯ ಸಹಯೋಗದಲ್ಲಿ ಜನವರಿ 16ರಂದು ಉದ್ಯೋಗಾಕಾಂಕ್ಷಿಗಳ ನೋಂದಣಿ ಶಿಬಿರವನ್ನು ಹಮ್ಮಿಕೊಂಡಿದ್ದು, ಜಿಲ್ಲೆಯ ನಿರುದ್ಯೋಗಿ ಯುವಜನತೆಗೆ ಹೊಸ ಆಶಾಕಿರಣವಾದ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ದ ನಿತೀಶ್ ಕೆ. ಅವರು ಮನವಿ ಮಾಡಿದ್ದಾರೆ.

ಸಿಯೋಲ್ ಕೇಂದ್ರವು ಕೇವಲ ಉದ್ಯೋಗ ಮಾಹಿತಿ ನೀಡುವ ಸಂಸ್ಥೆಯಾಗಿರದೆ ಯುವಜನತೆಯ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗುವಂತೆ ಕೌಶಲ್ಯಾಭಿವೃದ್ಧಿ ತರಬೇತಿಗಳು, ವ್ಯಕ್ತಿತ್ವ ವಿಕಸನ ಕಾರ್ಯಕ್ರಮಗಳು, ವೃತ್ತಿ ಮಾರ್ಗದರ್ಶನ, ಸಂವಹನ ಹಾಗೂ ವಾಕ್ ಸಾಮರ್ಥ್ಯ ವೃದ್ಧಿ, ಮೃದು ಕೌಶಲ್ಯಗಳು, ಸಂದರ್ಶನಕ್ಕೆ ಸಿದ್ಧತೆ, ಆಧುನಿಕ ಉದ್ಯೋಗ ಜಗತ್ತಿಗೆ ತಕ್ಕಂತೆ ತರಬೇತಿ ಸೇರಿದಂತೆ



ಅನೇಕಾನೇಕ ಕಾರ್ಯಕ್ರಮಗಳನ್ನು ನಿಯಮಿತವಾಗಿ ಆಯೋಜಿಸುವ ಮೂಲಕ ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯುವಜನತೆ ಯಶಸ್ವಿಯಾಗಿ ತೊಡಗಿಸಿಕೊಳ್ಳಲು ಅಗತ್ಯವಾದ ಸಾಮರ್ಥ್ಯವನ್ನು ಬೆಳೆಸಿಕೊಳ್ಳಲು ಬಹಳ ಸಹಕಾರಿಯಾಗಿವೆ.

ಈ ಎಲ್ಲಾ ತರಬೇತಿ ಕಾರ್ಯಕ್ರಮಗಳು ಜಿಲ್ಲಾಡಳಿತದಿಂದ ಸಂಪೂರ್ಣ (2ನೇ ಪುಟಕ್ಕೆ>>>)

## ರಾಹುಲ್ ಗಾಂಧಿ ಭೇಟಿ ಬೆನ್ನಲ್ಲೇ ಡಿಕೆಶಿ ಮಾಡಿದ ಪೋಸ್ಟ್ ಭಾರಿ ವೈರಲ್

**ಬೆಂಗಳೂರು, ಜ.14**– ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರನ್ನು ಭೇಟಿ ಮಾಡಿ ಬಂದ ಬೆನ್ನಲ್ಲೇ ಡಿಸಿಎಂ ಡಿ.ಕೆ.ಶಿವಕುಮಾರ್ ತಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಪೋಸ್ಟ್ ಭಾರಿ ವೈರಲ್ ಆಗಿದೆ.

ರಾಜಕೀಯವಾಗಿ ಯಾವತ್ತೂ ನೇರವಾಗಿ ತಮ ಅಭಿಪ್ರಾಯಗಳನ್ನು ವ್ಯಕ್ತಪಡಿಸದೆ, ಪರೋಕ್ಷವಾಗಿ ಕಾರ್ಯತಂತ್ರ ರೂಪಿಸುವ ಡಿ.ಕೆ.ಶಿವಕುಮಾರ್ ಅಧಿಕಾರ ಹಂಚಿಕೆಯ ವಿಚಾರವಾಗಿ ಅಳೆದು–ತೂಗಿ ಮಾತುಗಳನ್ನಾಡುತ್ತಿದ್ದಾರೆ. ಆಗೊಮೆ–ಈಗೊಮೆ ಹಳಿ ತಪ್ಪಿದ್ದನ್ನು ಹೊರತು ಪಡಿಸಿದರೆ ಬಹುತೇಕ ಸಂಯಮ ಕಾಯ್ದುಕೊಂಡಿದ್ದಾರೆ.

ಪ್ರತಿ ಹೇಳಿಕೆ ಮತ್ತು ಹೆಜ್ಜೆಯಲ್ಲೂ ಅತ್ಯಂತ ಜಾಗರೂಕತೆಯಿಂದಲೇ ವರ್ತಿಸುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಅವರ ಬಣದಲ್ಲಿ ಗುರುತಿಸಿಕೊಂಡಿ




ರುವ ಕೆಲಸ ಶಾಸಕರು, ದೆಹಲಿಗೆ ಹೋಗಿ ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಾಗಬೇಕು ಎಂದು ಒತ್ತಡ ಏರಿದ್ದರು. ಇತ್ತ ರಾಜ್ಯದಲ್ಲೂ ಕೆಲವರು ತಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವ ಮೂಲಕ ಪಕ್ಷಕ್ಕೆ ಮುಜುಗರ ಉಂಟು ಮಾಡಿದ್ದರು. ಇದಕ್ಕೆ ಪ್ರತಿಯಾಗಿ ಸಿದ್ದರಾಮಯ್ಯ ಅವರ ಆಪ್ತ ಬಳಗ ಪ್ರತಿ ತಂತ್ರಗಾರಿಕೆಗಳನ್ನು ರೂಪಿಸಿತ್ತು. ಎಲ್ಲದರ ನಡುವೆ ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಅವರ ಭೇಟಿಗೆ ಸಮಯವನ್ನೆ ನೀಡಿರಲಿಲ್ಲ. ಕಳೆದ ತಿಂಗಳು ಮೂರು ನಾಲ್ಕು ಬಾರಿ ದೆಹಲಿಗೆ ಹೋಗಿದ್ದರು, ರಾಹುಲ್ ಗಾಂಧಿ ಭೇಟಿಯಾಗಲು ಸಾಧ್ಯವಾಗಿರಲಿಲ್ಲ. ಬರಿ ಕೈಯಲ್ಲಿ ವಾಪಸ್ ಬಂದಿದ್ದರು. ಸಿದ್ದರಾಮಯ್ಯ ಅವರಿಗೆ ಸುಲಭವಾಗಿ ಭೇಟಿಯಾಗಲು ಲಭ್ಯವಾಗುತ್ತಿದ್ದ ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಅವರಿಂದ ಅಂತರ ಕಾಯ್ದುಕೊಳ್ಳುತ್ತಿದ್ದರು.

ತಮಿಳುನಾಡಿನ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳುವ ಮಾರ್ಗ ಮಧ್ಯೆ ನಿನ್ನೆ ರಾಹುಲ್ ಗಾಂಧಿ ಮೈಸೂರಿಗೆ ಆಗಮಿಸಿದ್ದರು. ಅವರನ್ನು ಸ್ವಾಗತಿಸುವ ನೆಪದಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಭೇಟಿಯಾಗಿದ್ದರು. ರಾಹುಲ್ ಗಾಂಧಿ ತಮಿಳುನಾಡಿನಿಂದ ವಾಪಸ್ ಬಂದು ದೆಹಲಿಗೆ ಪ್ರಯಾಣಿಸುವ ಸಂದರ್ಭದಲ್ಲಿ ಮತ್ತೆ ಅದೇ ವಿಮಾನ ನಿಲ್ದಾಣದ ಒಳಗೆ ಇಬ್ಬರು (2ನೇ ಪುಟಕ್ಕೆ>>>)

## ಈಡಿಗರ ಬೇಡಿಕೆಗಳನ್ನು ರಾಜ್ಯ ಸರಕಾರ ನಿರ್ಲಕ್ಷ್ಯ ಮಾಡಿದರೆ ಉಗ್ರ ಹೋರಾಟ: ಪ್ರಣಾವಾನಂದ ಸ್ವಾಮೀಜಿ



ಯುವಮಾರ್ಗ ಸುದ್ದಿ

**ಅರಕೇರಾ,ಜ.14**– ರಾಜ್ಯ ಸರ್ಕಾರ ಈಡಿಗ ಸಮಾಜದ ವಿವಿಧ ಬೇಡಿಕೆಗಳನ್ನು ಈಡೇರಿಸಲು ನಿರ್ಲಕ್ಷ್ಯ ಮಾಡಿದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಪ್ರಣಾವನಂದ ಸ್ವಾಮೀಜಿ ಅವರು ಹೇಳಿದರು.

ಅವರು ಅರಕೇರಾ ಪಟ್ಟಣದ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಆರ್ಯ ಈಡಿಗ ಸಮಾಜ ಹಮ್ಮಿಕೊಂಡಿದ್ದ ಜಾಗೃತಿ ಸಭೆಯಲ್ಲಿ ಮಾತನಾಡಿ, ಈಗಾಗಲೇ ರಾಜ್ಯ ಸರಕಾರಕ್ಕೆ ಸಮಾಜದ 18 ಬೇಡಿಕೆಗಳನ್ನು ಈಡೇರಿಸುವಂತೆ ಚಿತ್ತಾಪುರ ದಿಂದ ಬೆಂಗಳೂರಿನವರಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರಕಾರ ಬೇಡಿಕೆಗಳನ್ನು ಈಡೇರಿಸುವರೆಗೂ ಪಾದಯಾತ್ರೆ ಮುಂದುವರಿಯುತ್ತದೆ ಎಂದು ಹೇಳಿದರು.

ಈ ಸಭೆಯಲ್ಲಿ ಬೆಜೆಪಿ ಮುಖಂಡರಾದ ಅನಂತ ರಾಜ್ ನಾಯಕ ಮಾತನಾಡಿ, ಈಡಿಗ ಸಮಾಜದ ಬೇಡಿಕೆಗಳು ನ್ಯಾಯಯುತವಾಗಿದ್ದು ಸರಕಾರ ಕೂಡಲೇ ಸ್ಪಂದನೆ ಮಾಡಬೇಕು. ಸಣ್ಣ ಸಮುದಾಯಗಳು ಹೋರಾಟದ ಮೂಲಕ ತಮ್ಮ ಹಕ್ಕಗಳು ಪಡೆಯಲು ಸಾಧ್ಯ ಎಂದು ಹೇಳಿದರು. ಆರ್.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕರು ಹಾಗೂ ಕಾಂಗ್ರೆಸ್ ಮುಖಂಡ ಶ್ರೀ ರಾಜಶೇಖರ ನಾಯಕ ಮಾತನಾಡಿ, ಪೂಜ್ಯರು ಸಮಾಜದ ಬೇಡಿಕೆಗಳನ್ನು ಈಡೇರಿಸುವಂತೆ ಮಾಡುತ್ತಿರುವ ಪಾದಯಾತ್ರೆಯು ಯಶಸ್ವಿಯಾಗಲಿ, ನಮ್ಮ ಸರಕಾರ ನಿಮ್ಮ ಬೇಡಿಕೆಗಳಿಗೆ ಸ್ಪಂದಿಸುತ್ತದೆ. ಈಡಿಗ ಸಮಾಜವು ಎಲ್ಲ ಸಮುದಾಯಗಳೊಂದಿಗೆ ಒಳ್ಳೆಯ ಬಾಂಧವ್ಯ ಹೊಂದಿದ್ದು. ನಿಮ್ಮ ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದರು.

ಶಾಸಕಿ ಕರೆಮ್ಮ ಜಿ.ನಾಯಕ ಅವರ ಪುತ್ರಿ ಕುಮಾರಿ ಗೌರಿ ಸಹ ಪಾದಯಾತ್ರೆಯಲ್ಲಿ ಭಾಗವಹಿಸಿ ನಿಮ್ಮ ಸಮುದಾಯದ ಜೊತೆ ನಾವು ಇದ್ದೇವೆ ಸರಕಾರ ನಿಮ್ಮ ಬೇಡಿಕೆಗಳಿಗೆ ಕೂಡಲೇ ಸ್ಪಂದನೆ ಮಾಡಬೇಕು ಎಂದು ಪಾದಯಾತ್ರೆ ಉದ್ದಕ್ಕೂ ಹೆಜ್ಜೆ ಹಾಕಿದರು.

ಬಸವರಾಜ ಪೂಜಾರಿ ಮಾತನಾಡಿ ನಿಮ್ಮ ಸಮಾಜದ ಬೇಡಿಕೆಗಳಿಗೆ ನಮ್ಮ ಬೆಂಬಲ ಸಹ ಇರುತ್ತದೆ ಎಂದು ಹೇಳಿದರು.

ನಾರಾಯಣಗುರು ಪ್ರತಿಮೆ ಹೊತ್ತ ಸಾರೋಟದೊಂದಿಗೆ ಪ್ರಣವಾನಂದ ಸ್ವಾಮೀಜಿ ಹಾಗೂ ಈಡಿಗ ಸಮಾಜದ ಬಂಧುಗಳೊಂದಿಗೆ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಪಕ್ಷದ ಮುಖಂಡರು ಪಾದಯಾತ್ರೆ ಉದ್ದಕ್ಕೂ ಹೆಜ್ಜೆಹಾಕಿ ಬೆಂಬಲ ನೀಡಿದರು.

ಈ ಸಂದರ್ಭದಲ್ಲಿ ಈಡಿಗ ಸಮಾಜದ ಪೂಜ್ಯರಾದ ಮುನೇಶಪ್ಪ ತಾತಾ ನಾಗೋಲಿ, ರವಿ ಚನ್ನಬಸವ ತಾತಾ ನಾಗೋಲಿ, ಬಿಜೆಪಿ ಹಿರಿಯ ಮುಖಂಡ ಕೆ.ಅನಂತರಾಜ್ ನಾಯಕ, ಆರ.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕ ಕಾಂಗ್ರೆಸ್ ಮುಖಂಡ ಎ.ರಾಜಶೇಖರ ನಾಯಕ, ಶಾಸಕರ ಸುಪುತ್ರಿ ಗೌರಿ ಜಿ. ನಾಯಕ, ಕಾಂಗ್ರೆಸ್ ಮುಖಂಡ ಬಸವರಾಜ ಪೂಜಾರಿ, ವೆಂಕಟೇಶ ನಾಯಕ ದೊರೆ, ಸಚಿನ್ ನಾಯಕ್ ಪೋಲೀಸ್ ಪಾಟೀಲ್, ಜಿಲ್ಲಾಧ್ಯಕ್ಷ ನರಸಣ್ಣಗೌಡ ರಾಯಚೂರು, ರಾಚಣ್ಣ ಅಬಕಾರಿ ಗಣೇಕಲ್, ಶಾಂತಪ್ಪ ಸಾಹುಕಾರ, ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷ ಶರಣಗೌಡ ಸುಂಕೇಶ್ವರಹಾಳ, ರಂಗನಾಥ ಅಬಕಾರಿ, ಮಹಾತೇಶ ಪೂಜಾರಿ, ನಾಗಾರಜ ಕರ್ನಾಳ, ಡಾ.ಬಸನಗೌಡ ನಾಡಗೌಡ, ವಿರುಪ್ಪಣ್ಣ ದೊರೆ ಶಿಕ್ಷಕರು, ಜಿ.ಹನುಂತ್ರಾಯ ಕೊತ್ತದೊಡ್ಡಿ, ಅಶೋಕ ಚಾಗಭಾವಿ, ರಾಮನಗೌಡ ಸಿರಿವಾರ, ರಾಮನಂದ ಪಾಟೀಲ್, ಗದೆಪ್ಪ ಗುತ್ತೇದಾರ, ಮಹಾದೇವಪ್ಪ ನಾಗೋಲಿ, ಅಮರೇಶ ಇಟಗಿ, ಹನುಮಯ್ಯ ಕೊತ್ತದೊಡ್ಡಿ, ನಾಗರಾಜ ಜಾಡಲದಿನ್ನಿ, ಬಸವರಾಜ ಜಾಗಟಗಲ್, ಹುಸೇನಯ್ಯ ಜುಟ್ಟಮರಡಿ, ರಾಮು ಗುತ್ತೇದಾರ, ನರಸಪ್ಪ ಗುತ್ತೇದಾರ, ನಾಗೇಂದ್ರ ಗುತ್ತೇದಾರ, ರೆಡ್ಡಪ್ಪ ಗುತ್ತೇದಾರ, ವೆಂಕಟೇಶ ನಾಗೋಲಿ, ಚನ್ನಬಸವ ನಾಗೋಲಿ, ರಂಗಪ್ಪ ಭೂಮನಗುಂಡ ಸೇರಿದಂತೆ ವಿವಿಧ ಗ್ರಾಮಗಳ ಸಮಾಜದ ಮುಖಂಡರು ಹಾಗೂ ಈಡಿಗ ಸಮಾಜದ ಭಾಂಧವರು ಉಪಸ್ಥಿತರಿದ್ದರು.

## ವಿಕಲಚೇತನರ ಪುನರ್ವಸತಿ ಕಾರ್ಯಕರ್ತರಿಗೆ ಕನಿಷ್ಠ ವೇತನ ನೀಡಿ ಸಂಕಲ್ಪ ವಿಕಲಚೇತನರ ಒಕ್ಕೂಟ ರಾಯಚೂರು ವತಿಯಿಂದ ಮನವಿ

ಯುವಮಾರ್ಗ ಸುದ್ದಿ

**ಮಾನ್ವಿ,ಜ.14**– ಬೆಂಗಳೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ರವರಿಗೆ ವಿಕಲಚೇತನರ ವಿವಿಧ ನ್ಯಾಯಸಮ್ಮತ ಬೇಡಿಕೆಗಳ ಕುರಿತು ಮನವಿ ಪತ್ರ ಸಲ್ಲಿಸಲಾಗಿದೆ.

ಸಂಕಲ್ಪ ವಿಕಲಚೇತನರ ಒಕ್ಕೂಟ, ರಾಯಚೂರು ವತಿಯಿಂದ ವಿಕಲಚೇತನರ ಮಾಸಿಕ ಪಿಂಚಣಿ, ಉಚಿತ ಬಸ್ ಪಾಸ್, ವಿಕಲಚೇತನರಿಗಾಗಿ ಮೀಸಲಾದ 5% ಅನುದಾನದ ಸಮರ್ಪಕ ಬಳಕೆ, ಹಾಗೂ ವಿಶೇಷವಾಗಿ ಗ್ರಾಮ ಪಂಚಾಯಿತಿ, ಪಟ್ಟಣ, ನಗರ ಮತ್ತು ತಾಲೂಕು ಮಟ್ಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳನ್ನು ಶಾಶ್ವತಗೊಳಿಸುವುದು ಅಥವಾ ಕನಿಷ್ಠ ವೇತನ ನಿಗದಿಪಡಿಸುವುದು, ಪ್ರತ್ಯೇಕ ಕಚೇರಿ ಕೊಠಡಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ. ವಿಕಲಚೇತನರ ಹಾಗೂ ಪುನರ್ವಸತಿ ಕಾರ್ಯಕರ್ತರ ಸಮಸ್ಯೆಗಳ ಶಾಶ್ವತ ಪರಿಹಾರಕ್ಕಾಗಿ ಈ ಮನವಿ ಸಲ್ಲಿಸಲಾಗಿದ್ದು, ಮುಂದಿನ ದಿನಗಳಲ್ಲೂ ವಿಕಲಚೇತನರ ಹಕ್ಕು ಮತ್ತು ಸಬಲೀಕರಣಕ್ಕಾಗಿ ಸಂಘಟನೆಯ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಸಂಕಲ್ಪ ವಿಕಲಚೇತನರ ಒಕ್ಕೂಟ ತಿಳಿಸಿದೆ.

## ತಾಲೂಕು ಆಡಳಿತದಿಂದ ವಿವಿಧ ಜಯಂತಿಗಳ ಆಚರಣೆ ಕುರಿತಂತೆ ಪೂರ್ವ ಸಭೆ



ಯುವಮಾರ್ಗ ಸುದ್ದಿ

**ಮಾನ್ವಿ,ಜ.14**– ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ವಿವಿಧ ಜಯಂತಿಗಳ ಆಚರಣೆ ಕುರಿತಂತೆ ನಡೆದ ಪೂರ್ವ ಸಭೆಯಲ್ಲಿ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮಾತನಾಡಿ ಸರ್ಕಾರವು ನಾಡಿನ ವಿವಿಧ ಮಹಾನಿಯರ ಜೀವನ ಹಾಗೂ ತತ್ವಗಳನ್ನು ತಿಳಿಸುವ ಉದ್ದೇಶದಿಂದ ತಾಲೂಕು ಆಡಳಿತ ಹಾಗೂ ಸಮುದಾಯಗಳ ಸಹಭಾಗಿತ್ವದಲ್ಲಿ ವಿವಿಧ ಮಹಾನಿಯರ ಜಯಂತಿಗಳನ್ನು ಆಚರಿಸಲಾಗುತ್ತಿದೆ. ಜ.14 ರಂದು ಶಿವಯೋಗಿ ಸಿದ್ದರಾಮೇಶ್ವರ ಜಯಂತಿ, ಜ.19ರಂದು ಮಹಾಯೋಗಿ ವೇಮನ ಜಯಂತಿ,ಜ.21 ರಂದು ಅಂಬಿಗರ ಜಯಂತಿ,ಜ.25 ರಂದು ಸವಿತಾ ಮಹಾರ್ಷಿಗಳ ಜಯಂತಿಗಳನ್ನು ತಹಸೀಲ್ದಾರ್ ಕಚೇರಿಯಲ್ಲಿ ಮಹಾನಿಯರ ಭಾವ ಚಿತ್ರಗಳಿಗೆ ಪೂಜೆ ಸಲ್ಲಿಸುವ ಮೂಲಕ ಅರ್ಥ ಪೂರ್ಣವಾಗಿ ಸಮುದಾಯಗಳ ಸಹಭಾಗಿತ್ವದಲ್ಲಿ ಆಚರಿಸಲಾಗುವುದು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಾನಿಯರನ್ನು ತಾಲೂಕು ಆಡಳಿತ ವತಿಯಿಂದ ಸನ್ಮಾನಿಸಲಾಗುವುದು ,ವಿದ್ಯಾರ್ಥಿಗಳಿಗೆ ಪ್ರತಿಭಪುರಸ್ಕಾರ ನೀಡಲಾಗುವುದು. ಜ.26 ರಂದು ಗಣರಾಜ್ಯೋತ್ಸವ ದಿನಚಾರಣೆ ಅಂಗವಾಗಿ ಬೆಳಿಗ್ಗೆ ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಸಂಘ ಸಂಸ್ಥೆಗಳ ಕಚೇರಿಗಳಲ್ಲಿ ಕಡ್ಡಾಯವಾಗಿ ದೇಶದ ಮಹಾನಾಯಕರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ. ಕಚೇರಿ ಆವರಣದಲ್ಲಿ ಧ್ವಜಸಂಹಿತೆಯಂತೆ ರಾಷ್ಟ್ರಧ್ವಜರೋಹಣ ನೆರವೇರಿಸಿ ತಾಲೂಕು ಆಡಳಿತದಿಂದ ತಹಸೀಲ್ದಾರ್ ಕಚೇರಿ ಹಾಗೂ ತಾಲೂಕು ಕ್ರೀಡಾಂಗಣದಲ್ಲಿ ನಡೆಯುವ ಗಣರಾಜ್ಯೋತ್ಸವ ದಿನಚಾರಣೆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಪೂರ್ವಭಾವಿ ಸಭೆಯಲ್ಲಿ ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ,ತಾ.ಆರೋಗ್ಯಾಧಿಕಾರಿ ಡಾ.ಶರಣಬ ಸವರಾಜು, ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರಪಾಟೀಲ್ ,ಅಖೀಲಭಾರತ ವೀರಶೈವ ಲಿಂಗಾಯತ ಮಹಾಸಾಭ ತಾಲೂಕು ಅಧ್ಯಕ್ಷರಾದ ಅರುಣಚಂದಾ, ಸವಿತಾ ಸಮಾಜದ ತಾ.ಅಧ್ಯಕ್ಷರಾದ ರಾಘವೇಂದ್ರ ಹುಂದೇಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿದ ಸಮುದಾಯಗಳ ಮುಖಂಡರು ಭಾಗವಹಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

## ಜಿಲ್ಲಾಡಳಿತದಿಂದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ

ಯುವಮಾರ್ಗ ಸುದ್ದಿ

**ರಾಯಚೂರು,ಜ.14**– 12ನೇ ಶತಮಾನದಲ್ಲಿದ್ದ ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಡಿದ ವಚನಕಾರರಲ್ಲಿ ಪ್ರಮುಖರಾದ ಶಿವಯೋಗಿ ಸಿದ್ಧರಾಮೇಶ್ವರ ಅವರ ಜಯಂತಿಯನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 14ರಂದು ಆಚರಣೆ ಮಾಡಲಾಯಿತು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಸೇರಿದಂತೆ ಇತರೆ ಗಣ್ಯರು ಶಿವಯೋಗಿ ಸಿದ್ಧರಾಮೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಬಳಿಕ ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮಾ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಸಿಪಿಐಗಳಾದ ಉಮೇಶ



ಕಾಂಬಳೆ, ನಾಗರಾಜ್ ಮೇಕ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

**ಅದ್ದೂರಿ ಮೆರವಣಿಗೆ:** ಇದಕ್ಕು ಮೊದಲು ನಗರದ ಆಶಾಪೂರು ರಸ್ತೆಯ ಶಿವಯೋಗಿ ಸಿದ್ಧರಾಮೇಶ್ವರ ವೃತ್ತದಿಂದ ಮೆರವಣಿಗೆಯು ಆರಂಭಗೊಂಡು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಿಲ್ಲಾ ರಂಗಮಂದಿರಕ್ಕೆ ಬಂದು ಮುಕ್ತಾಯವಾಯಿತು. ಮೆರವಣಿಗೆಗೆ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಹಾಗೂ ನಗರ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ ಅವರು ಚಾಲನೆ ನೀಡಿದರು. ಈ ವೇಳೆ ರಾಯಚೂರು ಕಿಲ್ಲಾನ ಮಠದ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮೀಜಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು, ತಹಸೀಲ್ದಾರರು ಮತ್ತು ಸಮಾಜದ ಮುಖಂಡರು ಇದ್ದರು

# ಮೊದಲನೇಯ ಪುಟದಿಂದ

## ಜಿಲ್ಲಾಡಳಿತದಿಂದ ಜನವರಿ 16ರಂದು ಉದ್ಯೋಗಾಕಾಂಕ್ಷಿಗಳ ನೋಂದಣಿ ಶಿಬಿರ

ಉಚಿತವಾಗಿದ್ದು, ಇವುಗಳ ಪ್ರಯೋಜನವನ್ನು ಪಡೆಯಲು ಅಭ್ಯರ್ಥಿಗಳು ಸಿಯೋಲ್ ಕೇಂದ್ರದಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದ್ದು, ಜಿಲ್ಲೆಯ ಎಲ್ಲಾ ವಿದ್ಯಾವಂತ ನಿರುದ್ಯೋಗಿ ಯುವಕ, ಯುವತಿಯರಿಗೆ ಜನವರಿ 16ರಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ, ರಾಯಚೂರಿನಲ್ಲಿ ಉದ್ಯೋಗಾಕಾಂಕ್ಷಿಗಳ ನೋಂದಣಿ ಶಿಬಿರವನ್ನು ಆಯೋಜಿಸಲಾಗಿದೆ. ಈ ಶಿಬಿರದಲ್ಲಿ ಭಾಗವಹಿಸುವ ಮೂಲಕ ಅಭ್ಯರ್ಥಿಗಳು ತಮ್ಮ ಹೆಸರನ್ನು ನೇರವಾಗಿ ನೋಂದಾಯಿಸಿಕೊಳ್ಳಬಹುದು. ಅಥವಾ ಅಭ್ಯರ್ಥಿಗಳು ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ಆನ್‌ಲೈನ್‌ನಲ್ಲಿಯೂ ನೋಂದಣಿ ಮಾಡಿಕೊಳ್ಳುವ ಅವಕಾಶವಿದೆ ನೀಡಲಾಗಿದೆ.

ಏನಿದು ಸಿಯೋಲ್(ಅ-ಇಔಐ): ಜಿಲ್ಲಾಡಳಿತದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂಪ್ಲಾಯೆಂಟ್ ಅಪರ್ಚುನಿಟೀಸ್ ಅಂಡ್ ಲರ್ನಿಂಗ್ (ಸಿಯೋಲ್) ಕೇಂದ್ರವು ಕರ್ನಾಟಕ ರಾಜ್ಯದಲ್ಲಿಯೇ ರಾಯಚೂರು ಜಿಲ್ಲಾಡಳಿತದಿಂದ ಸ್ಥಾಪಿಸಲ್ಪಟ್ಟ ಒಂದು ವಿಶಿಷ್ಟ ಹಾಗೂ ಮಾದರಿ ಸಂಸ್ಥೆಯಾಗಿದ್ದು, ಜಿಲ್ಲೆಯ ನಿರುದ್ಯೋಗಿ ಯುವಕ-ಯುವತಿಯರ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಸಬಲೀಕರಣದ ದಿಸೆಯಲ್ಲಿ ಕಾರ್ಯನಿರ್ವಹಿಸುತ್ತಿದೆ.ರಾಯಚೂರು ಜಿಲ್ಲೆಯ ವಿದ್ಯಾವಂತ ನಿರುದ್ಯೋಗಿ ಯುವಜನತೆಗೆ ಉದ್ಯೋಗಾವಕಾಶಗಳನ್ನು ಒದಗಿಸುವುದು, ಉದ್ಯೋಗಾರ್ಹತೆಯನ್ನು ಹೆಚ್ಚಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಕಲ್ಪಿಸುವುದು ಹಾಗೂ ಸ್ವ-ಉದ್ಯೋಗದತ್ತ ಪ್ರೇರೇಪಿಸುವುದು ಎಂಬ ಬಹುಮುಖ ಉದ್ದೇಶವನ್ನು ಹೊಂದಿರುವ ಸಿಯೋಲ್ ಕೇಂದ್ರವು ಸರಕಾರಿ, ಅರೆ ಸರಕಾರಿ ಹಾಗೂ ಖಾಸಗಿ ವಲಯಗಳಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳ ಕುರಿತು ಸಮಗ್ರ ಹಾಗೂ ನಿಖರ ಮಾಹಿತಿಯನ್ನು ಒದಗಿಸುತ್ತಿದೆ. ಜೊತೆಗೆ ಖಾಸಗಿ ಸಂಸ್ಥೆಗಳ ಸಹಕಾರದೊಂದಿಗೆ ನೇಮಕಾತಿ ಶಿಬಿರಗಳು, ಸಂದರ್ಶನ ಪ್ರಕ್ರಿಯೆಗಳು ಹಾಗೂ ಉದ್ಯೋಗ ಮೇಳಗಳನ್ನು ಆಯೋಜಿಸುವ ಮೂಲಕ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ಉದ್ಯೋಗ ದೊರಕಿಸಿಕೊಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.ವಿಶೇಷವಾಗಿ ಸರಕಾರಿ ಹಾಗೂ ಅರೆ-ಸರಕಾರಿ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಯು.ಪಿ.ಎಸ್.ಸಿ., ಕೆ.ಪಿ.ಎಸ್.ಸಿ., ಕೆ.ಇ.ಎ. ಹಾಗೂ ಇತರೆ ನೇಮಕಾತಿ ಸಂಸ್ಥೆಗಳ ಮೂಲಕ ಆಯೋಜಿಸಲಾಗುವ ವಿವಿಧ ಸ್ಪರ್ಧಾತ್ಮಕ ನೇಮಕಾತಿ ಪರೀಕ್ಷೆಗಳ ಪೂರ್ವಸಿದ್ಧತಾ ತರಬೇತಿಗಳನ್ನು ಈ ಸಿಯೋಲ್ ಸಂಸ್ಥೆಯಲ್ಲಿ ನೀಡಲಾಗುವುದು. ಈ ತರಬೇತಿಗಳ ಮೂಲಕ ಅಭ್ಯರ್ಥಿಗಳಿಗೆ ಪಠ್ಯಕ್ರಮ ಆಧಾರಿತ ಅಧ್ಯಯನ, ಪರೀಕ್ಷಾ ತಂತ್ರಗಳು, ಮಾದರಿ ಪ್ರಶ್ನೆಪತ್ರಿಕೆಗಳು, ಸಂದರ್ಶನ ಸಿದ್ಧತೆ ಹಾಗೂ ಮಾರ್ಗದರ್ಶನವನ್ನು ಒದಗಿಸಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಅಗತ್ಯವಾದ ಸಮಗ್ರ ಬೆಂಬಲವನ್ನು ಕಲ್ಪಿಸಲಾಗುತ್ತದೆ.ಇದರೊಂದಿಗೆ, ಸ್ವ-ಉದ್ಯೋಗಕ್ಕೆ ಆಸಕ್ತಿ ಹೊಂದಿರುವ ಯುವಕ-ಯುವತಿಯರಿಗೆ ಸೂಕ್ತ ಮಾರ್ಗದರ್ಶನ, ತಾಂತ್ರಿಕ ಸಲಹೆಗಳು ಹಾಗೂ ಅಗತ್ಯವಾದ ತರಬೇತಿಗಳನ್ನು ಹಾಗೂ ಸರ್ಕಾರಿ ಯೋಜನೆಗಳ ಮಾಹಿತಿಯನ್ನು ನೀಡುವ ಮೂಲಕ ಉದ್ಯಮಶೀಲತೆಯನ್ನು ಉತ್ತೇಜಿಸುವ ಕಾರ್ಯವನ್ನು ಸಹ ಸಿಯೋಲ್ ಕೇಂದ್ರ ಕೈಗೊಳ್ಳುತ್ತಿದೆ. ಇದರಿಂದಾಗಿ ಯುವಜನತೆ ಸ್ವಾವಲಂಬಿಗಳಾಗಿ ತಮ್ಮದೇ ಆದ ಬದುಕು ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

## ರಾಹುಲ್ ಗಾಂಧಿ ಭೇಟಿ ಬೆನ್ನಲ್ಲೇ ಡಿಕೆಶಿ ಮಾಡಿದ ಪೋಸ್ಟ್ ಭಾರಿ ವೈರಲ್

ನಾಯಕರು ರಾಹುಲ್ ಗಾಂಧಿಯನ್ನು ಭೇಟಿ ಮಾತುಕತೆ ನಡೆಸಿದ್ದಾರೆ.ಬಳಿಕ ಡಿ.ಕೆ.ಶಿವಕುಮಾರ್ ಪ್ರತ್ಯೇಕವಾಗಿ ರಾಹುಲ್ ಗಾಂಧಿಯವರ ಜೊತೆ ಚರ್ಚೆ ನಡೆಸಿದ್ದಾರೆ. ಇಬ್ಬರ ನಡುವೆ ಕೆಲ ಕಾಲ ರಹಸ್ಯ ಮಾತುಕತೆ ನಡೆದಿದೆ. ಡಿ.ಕೆ.ಶಿವಕುಮಾರ್ ಹೇಳಿದ್ದನ್ನು ಕೇಳಿಸಿಕೊಂಡಿರುವ ರಾಹುಲ್ ಗಾಂಧಿ ಯಾವುದೇ ನಿರ್ಧಾರಕ್ಕೂ ಬರದೆ ಕೇವಲ ಔಪಚಾರಿಕವಾಗಿ ಕೈ ಕುಲುಕಿ ತಾವೇ ಮುಂದಾಗಿ ಅಲ್ಲಿಂದ ಹೊರಡಲು ಅನುವಾಗಿದ್ದಾರೆ. ಹೇಳಿದ್ದನ್ನೆಲ್ಲಾ ಹೇಳಿ ಆಗಿದೆ. ಇದರ ಮೇಲೆ ನಿಮ ಇಷ್ಟ ಎಂಬಂತೆ ಡಿ.ಕೆ.ಶಿವಕುಮಾರ್, ರಾಹುಲ್ ಗಾಂಧಿ ಹೋಗುವುದನ್ನೆ ನೋಡುತ್ತಾ ತಲೆ ಆಡಿಸಿ, ಕೈ ಮುಗಿದಿದ್ದಾರೆ. ಡಿ.ಕೆ.ಶಿವಕುಮಾರ್ ಮತ್ತು ರಾಹುಲ್ ಗಾಂಧಿಯವರ ಪ್ರತ್ಯೇಕ ಮಾತುಕತೆ ರಾಜಕೀಯವಾಗಿ ಭಾರೀ ಕುತೂಹಲ ಕೆರಳಿಸಿತ್ತು. ಸಂಕ್ರಾಂತಿಯ ಬಳಿಕ ಮಹತ್ವದ ಬೆಳವಣಿಗೆಗಳಾಗಬಹುದು ಎಂಬ ಲೆಕ್ಕಾಚಾರಗಳಿಗೆ ಇಂಬು ನೀಡಿತ್ತು.ಇಂದು ಬೆಳಗ್ಗೆ ಡಿ.ಕೆ.ಶಿವಕುಮಾರ್ ತಮ ಸಾಮಾಜಿಕ ಜಾಲತಾಣದಲ್ಲಿ ಒಂದು ಪೋಸ್ಟ್ ಮಾಡಿದ್ದಾರೆ. ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲವಾಗುವುದಿಲ್ಲ ಎಂದು ದಪ್ಪ ಅಕ್ಷರಗಳಲ್ಲಿ ನಮೂದಿಸಿದ್ದಾರೆ. ಅದರ ಕೆಳಗೆ ಸಣ್ಣ ಅಕ್ಷರಗಳಲ್ಲಿ ಕಂಡು ಕಾಣದಂತೆ ಉದ್ಯಮಿ ಒಕ್ಕಲಿಗ ಕಾರ್ಯಕ್ರಮದಲ್ಲಿ ಮಾತನಾಡಿರುವುದು ಎಂದು ಬರೆಯಲಾಗಿದೆ.ಉದ್ಯಮಿ ಒಕ್ಕಲಿಗ ಕಾರ್ಯಕ್ರಮ ಮುಗಿದು ಎರಡು ದಿನಗಳಾಗಿದೆ. ಅದೇ ದಿನ ಸಂಜೆ ಕುಣಿಗಲ್ ಉತ್ಸವದಲ್ಲಿ ಭಾಗವಹಿಸಿದ್ದಾರೆ. ನಿನ್ನೆ ಅರಮನೆ ಮೈದಾನದ ಆವರಣದಲ್ಲಿ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿಯೂ ಮಾತನಾಡಿದ್ದಾರೆ. ಬೇರೆಬೇರೆ ಕಾರ್ಯಕ್ರಮಗಳಲ್ಲಿ ಆಡಿರುವ ಯಾವ ಮಾತುಗಳನ್ನು ಸರಿಸಿಕೊಳ್ಳದ ಡಿ.ಕೆ.ಶಿವಕುಮಾರ್, ಪ್ರಯತ್ನ ವಿಫಲವಾದರೂ, ಪ್ರಾರ್ಥನೆ ಫಲ ನೀಡುತ್ತದೆ ಎಂದಿರುವುದು ಭಾರೀ ಕುತೂಲಹ ಕೆರಳಿಸಿದೆ. ರಾಹುಲ್ ಗಾಂಧಿಯವರ ಜೊತೆ ನಡೆದ ಸಂಭಾಷಣೆ ಫಲ ನೀಡಿಲ್ಲ. ಇನ್ನೂ ಮುಂದೆ ಪ್ರಾರ್ಥನೆಯೇ ಫಲ ನೀಡಬೇಕು ಎಂಬ ಅರ್ಥವೇ ? ಅಥವಾ ಈವರೆಗಿನ ಪ್ರಾರ್ಥನೆ ಫಲ ನೀಡಿದೆ, ರಾಹುಲ್ ಗಾಂಧಿ ತಮಗೆ ಬೆಂಬಲ ನೀಡಲು ಒಪ್ಪಿದ್ದಾರೆ ಎಂಬ ಅರ್ಥವೇ ಎಂಬುದನ್ನು ತಿಳಿಯದೇ ಕಾರ್ಯಕರ್ತರು ಗೊಂದಲಕ್ಕೆ ಒಳಗಾಗಿದ್ದಾರೆ.ಎರಡು ದಿನಗಳ ಹಿಂದಿನ ಕಾರ್ಯಕ್ರಮದಲ್ಲಿ ನೀಡಿದ್ದ ಹೇಳಿಕೆಯನ್ನು ಪೋಸ್ಟ್ ಮಾಡುವ ಮೂಲಕ ಡಿ.ಕೆ.ಶಿವಕುಮಾರ್, ಉದ್ಯಮಿ ಒಕ್ಕಲಿಗ ಕಾರ್ಯಕ್ರಮದಲ್ಲಿ ಮಾತನಾಡಿದ್ದು ಎಂದು ಬರೆದು ಸೇಫ್ ಗೇಮ್ ತಂತ್ರಗಾರಿಕೆ ಬಳಸಿದ್ದಾರೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಬಿಟ್ಟು ಕೊಡುವುದಿಲ್ಲ ಎಂದು ಹಠಕ್ಕೆ ಬಿದ್ದಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಕುರ್ಚಿ ಕಿತ್ತುಕೊಳ್ಳದೆ ಬಿಡುವುದಿಲ್ಲ ಎಂಬಂತೆ ತಂತ್ರಗಾರಿಕೆಯ ರಾಜಕಾರಣ ಮಾಡುತ್ತಿದ್ದಾರೆ. ಈ ನಡುವೆ ಸಿದ್ದರಾಮಯ್ಯ ಅವರು ತಾವು ರಾಹುಲ್ ಗಾಂಧಿ ಹೇಳಿದಂತೆ ಕೇಳುವುದಾಗಿ ಪದೇ ಪದೇ ಪ್ರತಿಪಾದಿಸುತ್ತಿದ್ದಾರೆ. ಭೇಟಿಗೆ ಸಮಯ ನೀಡದಿದ್ದ ರಾಹುಲ್ ಗಾಂಧಿಯನ್ನು ನಿನ್ನೆ ವಿಮಾನ ನಿಲ್ದಾಣದ ರನ್ ವೇನಲ್ಲಿ ಮಾತನಾಡುವ ಮೂಲಕ ಡಿ.ಕೆ. ಶಿವಕುಮಾರ್ ಒಂದು ಹಂತದ ಯಶಸ್ಸು ಗಳಿಸಿದ್ದಾರೆ. ಮಾತುಕತೆಯ ಫಲ ಶ್ರುತಿ ಏನು ಎಂದು ಅಧಿಕೃತವಾಗಿ ತಿಳಿದುಬಂದಿಲ್ಲ. ಪ್ರಾರ್ಥನೆ ವಿಫಲವಾಗುವುದಿಲ್ಲ ಎಂದು ಹೇಳಿರುವುದು ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಡಿ.ಕೆ.ಶಿವಕುಮಾರ್ ಅವರ ಒತ್ತಡಕ್ಕೆ ರಾಹುಲ್ ಗಾಂಧಿ ಮಣಿದಿದ್ದಾರೆಯೇ, ಸಿದ್ದರಾಮಯ್ಯ ಅವರ ಜೊತೆ ಚರ್ಚೆ ಮಾಡಿ, ಡಿ.ಕೆ.ಶಿವಕುಮಾರ್ ಅವರಿಗೆ ಅಧಿಕಾರ ಬಿಡಿಸಿಕೊಡುತ್ತಾರೆ ಎಂಬ ಕುತೂಹಲ ಹೆಚ್ಚಾಗಿದೆ. ಬಹಿರಂಗವಾಗಿ ಏನನ್ನು ಮಾತನಾಡದೇ ಸಾಮಾಜಿಕ ಜಾಲತಾಣದಲ್ಲಿ ಒಂದು ಪೋಸ್ಟ್ ಹಾಕುವ ಮೂಲಕ ಡಿ.ಕೆ.ಶಿವಕುಮಾರ್ ತಮ ಹಿತೈಷಿಗಳಿಗೆ ಮತ್ತು ಎದುರಾಳಿಗಳಿಗೆ ಸ್ಪಷ್ಟ ಸಂದೇಶ ನೀಡಿದಂತಿದೆ.

## ತಾಲೂಕು ಆಡಳಿತದಿಂದ ಕಾಯಕಯೋಗಿ ಶ್ರೀಸಿದ್ದರಾಮೇಶ್ವರರ 854 ನೇ ಜಯಂತಿ ಆಚರಣೆ



ಯುವಮಾರ್ಗ ಸುದ್ದಿ

**ಮಾನ್ವಿ,ಜ.14–** ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ಕಾಯಕಯೋಗಿ ಶ್ರೀಸಿದ್ದರಾಮೇಶ್ವರರ 854 ನೇ ಜಯಂತಿ ಕಾರ್ಯಕ್ರಮವನ್ನು ಶ್ರೀಸಿದ್ದರಾಮೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಿ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಮಾತನಾಡಿ 12ನೇ ಶಾತಮಾನದಲ್ಲಿ ಬಸವಾದಿ ಶರಣರ ಪ್ರಭವದಿಂದ ಶ್ರೀಸಿದ್ದರಾಮೇಶ್ವರರು ತಮ್ಮ ಜೀವನದಲ್ಲಿ ಕಾಯಕ ದಾಸೋಹ, ತತ್ವಗಳನ್ನು ಅಳವಡಿಸಿಕೊಂಡು ಕೆರೆ ಕಟ್ಟೆಗಳನ್ನು, ಸಾಮೂಹಿಕ ವಿವಾಹಗಳು ಸೇರಿದಂತೆ ಅನೇಕ ಸಾಮಾಜಿಕ ಸೇವಾ ಕಾರ್ಯಗಳನ್ನು ಕೈಗೊಂಡಿರುವದನ್ನು ಕಾಣಬಹುದು ಶ್ರೀ ಸಿದ್ದರಾಮೇಶ್ವರರ ವಚನಗಳಲ್ಲಿನ ತತ್ವ ಅದರ್ಶಗಳನ್ನು ಪ್ರತಿಯೋಬ್ಬರು ಕೂಡ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ನಿವೃತ್ತ ಶಿಕ್ಷಕ ಯಲ್ಲಪ್ಪ ನಿಲೋಗಲ್ ಶಿವಯೋಗಿ ಶ್ರೀಸಿದ್ದರಾಮೇಶ್ವರರ ಕುರಿತು ವಿಶೇಷ ಉಪನ್ಯಾಸ ನೀಡಿ ಶಿವಯೋಗಿ ಸಿದ್ದರಾಮೇಶ್ವರರು 68 ಸಾವಿರ ವಚನಗಳನ್ನು ರಚಿಸಿದ್ದು ಅವುಗಳಲ್ಲಿ 1,679 ವಚನಗಳು ಮಾತ್ರ ಲಭ್ಯವಿವೆ. ಇಂತಹ ಮಹಾಪುರುಷರನ ಆರಾಧಕರಾದ ಭೋವಿ ಸಮಾಜ ಶೈಕ್ಷಣಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಪ್ರಗತಿ ಸಾಧಿಸಬೇಕಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ತೋರಿದ ಹನುಮಂತಪ್ಪ ಕೊಟ್ನೆಕಲ್, ಬಸವರಾಜ ,ಮಲ್ಲಿಕಾರ್ಜುನ ಪೂಜಾರಿ, ಬಸವರಾಜ ಭಜಂತ್ರಿ, ಬಸ್ಸಪ್ಪ ಮದ್ಲಾಪುರ್‌ರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗ್ರೇಡ್-2 ತಹಸೀಲ್ದಾರ ಅಬ್ದುಲ್ ವಾಹಿದ್ ಭೋವಿ ಸಮಾಜ ಒಕ್ಕೂಟ ಸಮಿತಿ ಅಧ್ಯಕ್ಷ ಆನಂದ ಭೋವಿ ಮಾನ್ವಿ, ಪರಶುರಾಮ ಭಜಂತ್ರಿ ನಕ್ಕುಂದಿ, ಸಂತೋಷಕುಮಾರ, ಕರಿಯಪ್ಪ ಕೋಳಿಕ್ಯಾಂಪ್, ಆನಿಲಕುಮಾರ ಮುದ್ದಂಗುಡ್ಡಿ, ರೇಣುಗೋಪಾಲ ಭೋವಿ, ಹುಲಿಗೆಪ್ಪ ಮಾನ್ವಿ, ಅಮರೇಶ ಕೋಳಿಕ್ಯಾಂಪ್, ಈರಪ್ಪ ಭೋವಿ, ಶಿವಪ್ಪ ಭೋವಿ, ರಮೇಶ್ ಭೋವಿ ಸೇರಿದಂತೆ ಇನ್ನಿತರರು ಇದ್ದರು.

## ತೊಂಡಿಹಾಳ ಹುಲಿಗೆಮ್ಮ ದೇವಿಯ ಜಾತ್ರೆ: ಮದ್ಯ ಮಾರಾಟ ಬಂದ್

**ರಾಯಚೂರು,ಜ.14–** ಜಿಲ್ಲೆಯ ಲಿಂಗಸೂಗೂರು ತಾಲ್ಲೂಕಿನ ತೊಂಡಿಹಾಳ ಗ್ರಾಮದಲ್ಲಿ ಶ್ರೀ ಹುಲಿಗೆಮ್ಮ ದೇವಿಯ ಜಾತ್ರೆಯು ಸುಗಮವಾಗಿ ನಡೆಯಲು, ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗ್ರತ ಕ್ರಮವಾಗಿ ದಿನಾಂಕ:15-01-2026ರ ಸಾಯಂಕಾಲ 06ಗಂಟೆಯಿಂದ ದಿನಾಂಕ:19-01-2026ರ ಬೆಳಿಗ್ಗೆ 06 ಗಂಟೆಯವರೆಗೆ ತೋಂಡಿಹಾಳ ಗ್ರಾಮದ ಸುತ್ತಮುತ್ತಲಿನ ಸುಮಾರು 10 ಕಿ.ಮೀ ವ್ಯಾಪ್ತಿಯವರೆಗೆ ಅಬಕಾರಿ ಕಾಯ್ದೆ 1965 ರ ಕಲಂ. 21 (1) ರನ್ವಯ ಎಲ್ಲಾ ರೀತಿಯ ಮದ್ಯ ತಯಾರಿಕಾ ಘಟಕಗಳು/ಸಾಗಾಣಿಕೆ/ ಮತ್ತು ಸಂಗ್ರಹಣೆಯನ್ನು/ ಮಾರಾಟ ಮಳಿಗೆಗಳನ್ನು ಬಂದ್ ಇಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ವಿತರಣಾ ಕಾಲುವೆ ಸಂಖ್ಯೆ 102ರ ಸುತ್ತಲಿನ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿ

**ರಾಯಚೂರು,ಜ.14–** ಗಣೇಕಲ್ ಜಲಾಶಯದಿಂದ ರಾಂಪೂರಿಗೆ ಕುಡಿಯುವ ನೀರನ್ನು ಹರಿಸಲು ವಿತರಣಾ ಕಾಲುವೆ ಸಂಖ್ಯೆ: 102ರ ಸುತ್ತಲಿನ ಪ್ರದೇಶದ ವ್ಯಾಪ್ತಿಯಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ದಿನಾಂಕ:13-01-2026 ರಂದು ಮಧ್ಯರಾತ್ರಿ 12 ಗಂಟೆಯಿಂದ ಅನ್ವಯವಾಗುವಂತೆ ದಿನಾಂಕ:19-01-2026 ಮಧ್ಯರಾತ್ರಿ 12 ಗಂಟೆಯವರೆಗೂ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ಈ ಕಾಲುವೆಯ ಸುತ್ತಮುತ್ತಲಿನ ಪ್ರದೇಶದ ವ್ಯಾಪ್ತಿಯಲ್ಲಿ 100 ಮೀಟರ್ ಸುತ್ತುವರೆದ ಪ್ರದೇಶದಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ಜನವರಿ 16ರಂದು ರಾಯಚೂರು ಉತ್ಸವದ ವಿಶೇಷ ಕಾರ್ಯಕ್ರಮ: ಸರ್ವರಿಗೂ ಆಹ್ವಾನ

**ರಾಯಚೂರು,ಜ.14–** ರಾಯಚೂರು ಜಿಲ್ಲೆಯಲ್ಲಿ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ವೇಳಾ ಪಟ್ಟಿ, ಬ್ಯಾನರ್, ಪೋಸ್ಟರ್, ಬಲೂನ್, ಪಾಂಪ್ಲೆಂಟ್ಸ್, ಪಾಸ್, ಸಾಮಾಜಿಕ ಜಾಲತಾಣಗಳ ಬಿಡುಗಡೆ ಕಾರ್ಯಕ್ರಮವು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜನವರಿ 16ರ ಬೆಳಿಗ್ಗೆ 09 ಗಂಟೆಗೆ ನಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಬಿಡುಗಡೆ ಸಮಾರಂಭಕ್ಕೆ ಜಿಲ್ಲೆಯ ರೈತರು, ಸಾಹಿತಿಗಳು, ಮಾಧ್ಯಮದವರು, ಕವಿಗಳು, ಬುದ್ಧಿ ಜೀವಿಗಳು, ವಿವಿಧ ಸಂಘಟನೆ ಮುಖ್ಯಸ್ಥರು, ಪದಾಧಿಕಾರಿಗಳು, ವ್ಯಾಪಾರಸ್ಥರು, ಕಾರ್ಮಿಕರು, ವಿವಿಧ ಕ್ಷೇತ್ರಗಳ ಸಾಧಕರು/ಕಲಾವಿದರು ಹಾಗೂ ಸಾರ್ವಜನಿಕರು ಹಾಜರಾಗುವ ಜೊತೆಗೆ ಈ ಸಾಂಸ್ಕೃತಿಕ ಹಬ್ಬವು ಕೇವಲ ಒಂದು ಸರ್ಕಾರಿ ಕಾರ್ಯಕ್ರಮವಾಗದೆ ಜಿಲ್ಲೆಯ ಪ್ರತಿಯೊಬ್ಬ ನಾಗರಿಕನೂ ಹೆಮ್ಮೆಪಡುವಂತಹ ಜನೋತ್ಸವವಾಗಿ ಮೂಡಿಬರಲು ತಾವುಗಳು ಪಾಲ್ಗೊಂಡು ಈ ಮಹತ್ಕಾರ್ಯವನ್ನು

ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನವರಿ 16ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ರಾಯಚೂರು,ಜ.14–** ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಜನವರಿ 16ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 7.30 ಗಂಟೆಗೆ ಕಲಬುರಗಿಯಿಂದ ನಿರ್ಗಮಿಸಿ ಬೆಳಿಗ್ಗೆ 9 ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಿ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ಸಹಯೋಗದಲ್ಲಿ ಏರ್ಪಡಿಸಿರುವ ರಾಯಚೂರು ಉತ್ಸವದ ಕ್ಯಾಲೆಂಡರ್ ಆಫ್ ಇವೆಂಟ್ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 11 ಗಂಟೆಗೆ ಪಕ್ಷದ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸುವರು. ಮಧ್ಯಾಹ್ನ 12 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ರಾಯಚೂರು ಉತ್ಸವ ಕುರಿತು ಪೂರ್ವಸಿದ್ಧತಾ ಸಭೆ ನಡೆಸುವರು.

ಮಧ್ಯಾಹ್ನ 2.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಕೃಷ್ಣಗೌಡ ತಾಯಣ್ಣವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಜಿಲ್ಲಾ ಉತ್ಸವ; ಜನವರಿ 26ರಿಂದ ಹೆಲಿಕ್ಯಾಪ್ಟರ್ ರೈಡ್

**ರಾಯಚೂರು,ಜ.14–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಜನವರಿ 26ರಿಂದ 31ರವರೆಗೆ ರಾಯಚೂರು ಜಿಲ್ಲೆಯ ನಾಗರೀಕರಿಗೆ ಬಾನಂಗಳದಿಂದ ರಾಯಚೂರು ವೀಕ್ಷಣೆಗೆ ರಾಯಚೂರು ಬೈಸ್ಕಯ್ ಎಂಬ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮ ಆಯೋಜಿಸಲಾಗಿದೆ.

ನಗರದ ಮಹಾತ್ಮಗಾಂಧೀ ಜಿಲ್ಲಾ ಕ್ರೀಡಾಂಗಣದ ಆವರಣದಿಂದ ಹೆಲಿಕ್ಯಾಪ್ಟರ್ ರೈಡ್‌ಗೆ ಅವಕಾಶ ಕಲ್ಪಿಸಲಾಗಿದೆ. ಈ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವು ಪ್ರತಿದಿನ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12ರವರೆಗೆ ಹಾಗೂ ಮಧ್ಯಾಹ್ನ 12.30ರಿಂದ ಸಂಜೆ 4.30ರವರೆಗೆ ನಡೆಯಲಿದ್ದು, ಪ್ರತಿಯೊಬ್ಬರಿಗೆ ಕೇವಲ 3500 ರೂ.ಗಳನ್ನು ನಿಗದಿ ಮಾಡಲಾಗಿದೆ. 2 ವರ್ಷದೊಳಗಿನ ಮಕ್ಕಳಿಗೆ ಉಚಿತ ಪ್ರವೇಶ ನೀಡಲಾಗುವುದು. ಟಿಕೇಟ್ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ ರಾಯಚೂರು ಇವರನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಉತ್ಸವ ಸಮಿತಿಯ ಪ್ರಕಟಣೆ ತಿಳಿಸಿದೆ.

## ರಾಯಚೂರು ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿ ಕೇಂದ್ರ ಆರಂಭ; ನೋಂದಣಿಗೆ ಅವಕಾಶ

**ರಾಯಚೂರು,ಜ.14–** 2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ಈಗಾಗಲೇ ಖರೀದಿ ಕೇಂದ್ರಗಳನ್ನು ಗುರುತಿಸಲಾಗಿದ್ದು, ಮುಂಗಾರು ಋತುವಿನಲ್ಲಿ ಬಿಳಿಜೋಳವನ್ನು ಬೆಳೆದಿರುವ ಆಸಕ್ತ ರೈತರು ಈ ಯೋಜನೆಯಡಿ ಬೆಳೆಯನ್ನು ಸರ್ಕಾರಕ್ಕೆ ಮಾರಾಟ ಮಾಡಲು ಪ್ರತಿ ಎಕರೆಗೆ 15 ಕ್ವಿಂಟಾಲ್ ನಂತೆ ಗರಿಷ್ಠ 150 ಕ್ವಿಂಟಾಲ್ ಜೋಳವನ್ನು ಹತ್ತಿರದ ಖರೀದಿ ಕೇಂದ್ರಗಳಲ್ಲಿ ಫ್ರೂಟ್ಸ್ ಐಡಿಯೊಂದಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ರಾಜ್ಯದಾದ್ಯಂತ ಒಟ್ಟು 3 ಲಕ್ಷ ಮೆ.ಟನ್ ಜೋಳದ ಗುರಿಯನ್ನು ನಿಗಧಿಪಡಿಸಲಾಗಿದ್ದು, ಅದರಲ್ಲಿ ಮುಂಗಾರು ಋತುವಿನಲ್ಲಿ 0.88 ಲಕ್ಷ ಮೆಟ್ರಿಕ್ ಟನ್ & ಹಿಂಗಾರು ಋತುವಿನಲ್ಲಿ 2.12 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿಸಲು ಮಿತಿಯನ್ನು ನಿಗಧಿಪಡಿಸಲಾಗಿದೆ.

ಅಲ್ಲದೇ ಒಬ್ಬ ರೈತನು ಯಾವುದಾದರು ಒಂದು ಋತುವಿನಲ್ಲಿ ಮಾತ್ರ ಈ ಯೋಜನೆಯಡಿ ಜೋಳವನ್ನು ನೋಂದಣಿ ಮಾಡಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿದ್ದು, ಜನವರಿ 14 ರಿಂದ ಕೇಂದ್ರಗಳಲ್ಲಿ ನೋಂದಣಿ ಪ್ರಾರಂಭಗೊಂಡಿದ್ದು, ಆಯಾ ತಾಲ್ಲೂಕಿನ ಎಲ್ಲಾ ಗ್ರಾಮಗಳ ರೈತರು ಖರೀದಿ ಕೇಂದ್ರಗಳಲ್ಲಿ ನೋಂದಣಿ ಪ್ರಕ್ರಿಯೆಲ್ಲಿ ಭಾಗಿಯಾಗುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೈಬ್ರೀಡ್ ಬಿಳಿ ಜೋಳ ಖರೀದಿ ಪ್ರಕ್ರಿಯೆ ಆರಂಭ ಸದುಪಯೋಗಕ್ಕೆ ಜಯವಂತರಾವ್ ಪತಂಗೆ ಸಲಹೆ

**ರಾಯಚೂರು,ಜ.14–** ಜಿಲ್ಲಾಡಳಿತವು 2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಮುಂದಾಗಿದ್ದು, ಈ ಯೋಜನೆಯ ಸಹಾಯ ಪಡೆದುಕೊಳ್ಳಬೇಕು ಎಂದು ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಜಯವಂತರಾವ್ ಪತಂಗೆ ಅವರು ರಾಯಚೂರು ಜಿಲ್ಲೆಯ ರೈತರಲ್ಲಿ ಮನವಿ ಮಾಡಿದ್ದಾರೆ.

ಫ್ರೂಟ್ಸ್ ಐಡಿ ತಂತ್ರಾಂಶದಲ್ಲಿ ಕಡ್ಡಾಯವಾಗಿ ಬೆಳೆ ಸಮೀಕ್ಷೆ ನೋಂದಣಿಯಾದ ರೈತರಿಂದ ಪ್ರತಿ ಎಕರೆಗೆ 15 ಕ್ವಿಂಟಲ್ ರಂತೆ ಗರಿಷ್ಠ 150 ಕ್ವಿಂಟಲ್ ಹೈಬ್ರೀಡ್ ಬಿಳಿ ಜೋಳವನ್ನು ಪ್ರತಿ ಕ್ವಿಂಟಲ್‌ಗೆ 3699 ರೂ.ಗಳ ಬೆಂಬಲ ಬೆಲೆ ನಿಗದಿ ಪಡಿಸಲಾಗಿದೆ. ನೋಂದಣಿಗೆ ಬರುವ ರೈತರು ಕಡ್ಡಾಯವಾಗಿ ಫ್ರೂಟ್ಸ್ ಸಂಖ್ಯೆ (ಎಫ್‌ಐ.ಡಿ ಸಂಖ್ಯೆ) ಆಧಾರ್ ಕಾರ್ಡ್, ಪಹಣಿ, ನಕಲು ಪ್ರತಿ ಮತ್ತು ರೈತರ ಬೆರಳಚ್ಚು ನೀಡುವುದು ಕಡ್ಡಾಯವಾಗಿದ್ದು ರೈತರು ಮಾರ್ಗಸೂಚಿ ಪಾಲನೆ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಯುವ ಮಾರ್ಗ

www.yuvamarga.com Yuva Marga yuva_marga_

# ವಿವಿಧ ಬೇಡಿಕೆ ಕುರಿತು ರೈತ ಸಂಘಟನೆಗಳು ಸಿಎಂಗೆ ಮನವಿ



**ಯಡ್ರಾಮಿ:ಜ.14–**ತಾಲೂಕು ಕೇಂದ್ರವಾಗಿ 12 ಯಡ್ರಾಮಿ ವರ್ಷವಾದರೂ ವಿವಿಧ ಕಚೇರಿಗಳು ಪ್ರಾರಂಭವಾಗಿಲ್ಲ ಅಭಿವೃದ್ಧಿ ಕಾರ್ಯಗಳು ಮೂಲಭೂತ ಸೌಕರ್ಯಗಳು ಒದಗಿಸಬೇಕು ಎಂದು ವಿವಿಧ ರೈತ ಸಂಘಟನೆಗಳಿಂದಸಿಎಂ ಅವರಿಗೆ ಮನವಿ ಮಾಡಲಾಯಿತ್ತು.

ಯಡ್ರಾಮಿ ಪಟ್ಟಣಕ್ಕೆ ಸೋಮವಾರ ಆಗಮಿಸಿದ್ದ ಸಿಎಂ ಸಿದ್ದರಾಮಯ್ಯ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ವೇಳೆಯಲ್ಲಿ ರೈತಸಂಘಟನೆಗಳು.

ತಾಲ್ಲೂಕಿನ ಪ್ರತಿಯೊಂದು ಗ್ರಾಮಗಳಿಂದ ಸಾರ್ವಜನಿಕರು ಕೆಲಸ ಕಾರ್ಯಗಳಿಗಾಗಿ ಜೇವರ್ಗಿಗೆ ತೆರಳಬೇಕಿದ್ದು, ಶೀಘ್ರದಲ್ಲಿ ಎಲ್ಲ ಇಲಾಖೆ ಕಚೇರಿಗಳನ್ನು ಆರಂಭಿಸಿ ಅನುವು ಮಾಡಿಕೊಡಬೇಕು.

ಬಡ ವಿದ್ಯಾರ್ಥಿಗಳ ಶೈಕ್ಷಣಿಕ ದೃಷ್ಟಿಯಿಂದ ಪಟ್ಟಣದಲ್ಲಿ ಪದವಿ ಕಾಲೇಜು ಹಾಗೂ ಹೆಣ್ಣು ಮಕ್ಕಳ ಪದವಿ ಪೂರ್ವ ವಸತಿ ನಿಲಯ ಪ್ರಾರಂಭ ಮಾಡಬೇಕು.ತಾಲೂಕಿನ ಪ್ರತಿಯೊಂದು ಗ್ರಾಮಗಳಿಗೆ ರಸ್ತೆ ಹಾಳಾಗಿದ್ದು ತಕ್ಷಣ ರಸ್ತೆ ಸುಧಾರಣೆ ಮಾಡಬೇಕು ಹಾಗೂ ತಾಲೂಕಿನ ಹಳ್ಳಿಯ ಸಾರ್ವಜನಿಕರು ಶಾಲಾ ಮಕ್ಕಳು ತಾಲೂಕು ಕೇಂದ್ರಕ್ಕೆ ಬರುವುದಕ್ಕೆ ಬಸ್ ಸೌಕರ್ಯ ಇರುವುದಿಲ್ಲ ತಕ್ಷಣ ಒದಗಿಸಿ ಅನುಕೂಲ ಮಾಡಿಕೊಡಬೇಕು ಮನವಿ ಸಲ್ಲಿಸಿದರು.

ರೈತ ಸಂಘಟನೆ ಮುಖಂಡರಾದ ಶಫೀ ಉಲ್ಲಾ ದಖನಿ ಬಿಸಿಲು ನಾಡಿನ ಹಸಿರು ಸೇನೆ ರಾಜ್ಯ ಅಧ್ಯಕ್ಷರು ಯಡ್ರಾಮಿ,ಈರಣ್ಣ ಬಜಂತ್ರಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷರು ಯಡ್ರಾಮಿ,ಸಂಘಟನೆಯ ಬಸುಗೌಡ ಪಾಟೀಲ್ ಗವರ, ಅಲ್ಲಾ ಪಟೇಲ್ ಇಜೇರಿ, ದೇವಕ್ಕಿ ಯಾಳವಾರ,ಬಸವರಾಜ ಹೊನ್ನಳಿ,ನಿಂಗಣ್ಣ ಹರನಾಳ,ಕಲ್ಲಪ್ಪ ಪೂಜಾರಿ,ನಾಗು ಪೂಜಾರಿ ,ಮಡಿವಾಳಪ್ಪ ಮೆಲಿನಮನಿ ಇತರರು ಇದ್ದರು.

# ಪಾದಯಾತ್ರೆ: ವರಿಷ್ಠರೊಂದಿಗೆ ಚರ್ಚಿಸಿ ನಿರ್ಧಾರ

**ಚಿತ್ರದುರ್ಗ,ಜ.14–** ಬಳ್ಳಾರಿ ಟೂ ಬೆಂಗಳೂರು ಬಿಜೆಪಿ ಪಾದಯಾತ್ರೆ ಮಾಡಬೇಕು ಎಂಬುದು ರಾಜ್ಯದ ಎಲ್ಲಾ ನಾಯಕರ ಅಭಿಪ್ರಾಯವಾಗಿದ್ದು, ವರಿಷ್ಠರ ಜೊತೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಚಿತ್ರದುರ್ಗದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾದಯಾತ್ರೆ ಮಾಡಬೇಕು ಎಂಬುವುದು ಜನಾದನರೆಡ್ಡಿ, ಶ್ರೀರಾಮುಲು ಅಭಿಪ್ರಾಯ ಮಾತ್ರ ಅಲ್ಲ, ನಮ್ಮೆಲ್ಲರ ಅಭಿಪ್ರಾಯವಾಗಿದೆ. ವರಿಷ್ಠರ ಜೊತೆ ಈಗಾಗಲೇ ನಾನು ಮಾತನಾಡಿದ್ದೇನೆ. ಒಂದೆರಡು ದಿನದಲ್ಲಿ ಪಾದಯಾತ್ರೆ ಬಗ್ಗೆ ಮಾಹಿತಿ ಸಿಗಲಿದೆ ಎಂದ ಅವರು, ರಾಜ್ಯದಲ್ಲಿ ಅರಾಜಕತೆ ವಿರುದ್ಧ ಹೋರಾಟಕ್ಕೆ ಪಕ್ಷ ನಿರ್ಧಾರ ಮಾಡಿದ್ದು, ಮೊದಲ ಹಂತದಲ್ಲಿ ಜ.17ಕ್ಕೆ ಬಳ್ಳಾರಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಲಿದ್ದೇವೆ ಎಂದರು.

ಡಿಸಿಎಂ ಡಿಕೆಶಿ ಶಿಕಾರಿಪುರಕ್ಕೆ ಪಾದಯಾತ್ರೆ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪಾದಯಾತ್ರೆ ಬೇಡ ಡಿ.ಕೆ.ಶಿವಕುಮಾರ್ ಶಿಕಾರಿಪುರಕ್ಕೆ ಬಂದು ಸ್ಪರ್ಧೆ ಮಾಡಲಿ ಎಂದು ಸವಾಲು ಹಾಕಿದರು.

ಮೈಸೂರು ಹೆಲಿಪ್ಯಾಡ್ ನಲ್ಲಿ ರಾಹುಲ್ ಗಾಂಧಿ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಚರ್ಚೆ ವಿಚಾರಕ್ಕೆ ಮಾತನಾಡಿ, ಒಬ್ಬರಿಗೆ ಸಿಎಂ ಕುರ್ಚಿ ಉಳಿಸಿಕೊಳ್ಳುವ ಕಾತುರವಿದೆ. ನನ್ನ ತಾಳ್ಮೆ ಕೆಣಕಬೇಡಿ ಎಂದು ಉಳಿದವರು ಸಿದ್ಧರಾಗಿದ್ದಾರೆ. ಅದು ಕಾಂಗ್ರೆಸ್ ಪಕ್ಷದ ಆಂತರಿಕ ಕಚ್ಚಾಟ. ಇರಲಿ ಬಿಡಿ ಪಾಪ ಎಂದು ಲೇವಡಿ ಮಾಡಿದರು.




ಮನರೇಗಾ ಯೋಜನೆಯಲ್ಲಿ ಸಾಕಷ್ಟು ಭ್ರಷ್ಟಾಚಾರ ನಡೆದಿದೆ. ಗ್ರಾಮೀಣ ಅಭಿವೃದ್ಧಿಗಾಗಿ ಜಿ ರಾಮ್ ಜಿ ಯೋಜನೆ ಮಾಡಲಾಗಿದೆ. ಆದರೆ ಈ ಯೋಜನೆ ಬಗ್ಗೆ ಸಿದ್ಧರಾಮಯ್ಯ, ರಾಹುಲ್ ಗಾಂಧಿಯಿಂದ ಅಪಪ್ರಚಾರ ನಡೆಸಲಾಗುತ್ತಿದೆ. ಆದ್ದರಿಂದ ಬಿಜೆಪಿ ರಾಜ್ಯದೆಲ್ಲೆಡೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಹೆಚ್.ಡಿ.ದೇವೆಗೌಡ್ರು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಅವರು ನರೇಂದ್ರ ಮೋದಿ ಅವರ ಕೈ ಬಲ ಪಡಿಸಲು ಎನ್ ಡಿಎ ಸೇರಿದ್ದಾರೆ. ಅದರಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಬಗ್ಗೆ ವರಿಷ್ಠರೇ ತೀರ್ಮಾನಿಸುತ್ತಾರೆ ಎಂದರು.

ಈ ವೇಳೆ ಸಂಸದ ಗೋವಿಂದ ಕಾರಜೋಳ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕ ಜೆ.ಹೆಚ್.ತಿಪ್ಪಾರೆಡ್ಡಿ, ಬಿಜೆಪಿ ಜಿಲ್ಲಾಧ್ಯಕ್ಷ ಕುಮಾರಸ್ವಾಮಿ, ವೀರಶೈವ ಬ್ಯಾಂಕ್ ಅಧ್ಯಕ್ಷ ಪಟೇಲ್ ಶಿವಕುಮಾರ್ ಸೇರಿದಂತೆ ಇತರರು ಹಾಜರಿದ್ದರು.

# ಮರಣಾನಂತರವೂ ಮಾನವಸೇವೆ :ಬ್ರಿಮ್ಸ್‌ನಲ್ಲಿ ದೇಹದಾನಿಗಳಿಗೆ ಗೌರವ



**ಬೀದರ್:ಜ.14–**ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬ್ರಿಮ್ಸ್)ಯಲ್ಲಿ ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನಕ್ಕಾಗಿ ಸ್ವ-ಇಚ್ಛೆಯಿಂದ ಮರಣಾನಂತರ ದೇಹದಾನ ಮಾಡಿದ ದಾನಿಗಳನ್ನು ಗೌರವಿಸುವ ಕಾರ್ಯಕ್ರಮ ಜರುಗಿತು.

ಬಸವಕಲ್ಯಾಣದ ನಿವಾಸಿ ದಿವಂಗತ ಶ್ರೀಮತಿ ರತ್ನಮ್ಮಾ ಎನ್. ಅವುಸೆ ಅವರು ತಮ್ಮ ಮೃತದೇಹವನ್ನು ಬ್ರಿಮ್ಸ್ಗೆ ದಾನ ಮಾಡಿದ ಪ್ರಯುಕ್ತ, ಅವರ ಪುತ್ರರಾದ ಶ್ರೀ ಶಿವಪುತ್ರಪ್ಪಾ ತಂದೆ ನಾಗಶೆಟ್ಟೆಪ್ಪಾ ಅವುಸೆ ಹಾಗೂ ಕುಟುಂಬದ ಸದಸ್ಯರನ್ನು ಸನ್ಮಾನಿಸಲಾಯಿತು.

ಅದೇ ರೀತಿ, ಬೀದರ್ ನಗರದ ಶಿವನಗರ ನಿವಾಸಿಗಳಾದ ನಿವೃತ್ತ ಎಸ್‌ಬಿಐ ಬ್ಯಾಂಕ್ ಉದ್ಯೋಗಿ ಶ್ರೀ ಶಿವಕುಮಾರ ಎಚ್. ತಗಾರೆ, ಅವರ ಪತ್ನಿ ಶ್ರೀಮತಿ ನಿರ್ಮಲಾ ಎಸ್. ತಗಾರೆ, ತಾಯಿ ಶ್ರೀಮತಿ ಗುಂಡಮ್ಮಾ ಎಚ್. ತಗಾರೆ ಹಾಗೂ ನೌಬಾದ ನಿವಾಸಿ ಶ್ರೀಮತಿ ಕೌಶ್ಯಲ್ಯದೇವಿ ಬಿ.ಕೆ. ತಂಗಾ ಇವರನ್ನೂ ದೇಹದಾನಕ್ಕಾಗಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬ್ರಿಮ್ಸ್ ನಿರ್ದೇಶಕರಾದ ಡಾ. ಶಿವಕುಮಾರ ಶೇಟಕಾರ, ಪ್ರಾಂಶುಪಾಲರಾದ ಡಾ. ರಾಜೇಶ ಪಾರಾ, ಮುಖ್ಯ ಆಡಳಿತಾಧಿಕಾರಿ ಶ್ರೀ ಶ್ರಿಕಾಂತ ವ್ಯೇರಾಗೆ ಹಾಗೂ ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸಂದೀಪ ದೇಶಮುಖ ಅವರು ದೇಹದಾನಿಗಳಿಗೆ ಶಾಲು ಹೊದಿಸಿ, ಪ್ರಮಾಣಪತ್ರ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಶಿವಪುತ್ರಪ್ಪಾ ಅವುಸೆ ಅವರು, "ನನ್ನ ತಾಯಿಯ ಇಚ್ಛೆಯಂತೆ ಬ್ರಿಮ್ಸ್ ವೈದ್ಯಕೀಯ ಕಾಲೇಜಿನ ಎಂ.ಬಿ.ಬಿ.ಎಸ್ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳ ವೈಜ್ಞಾನಿಕ ಅಧ್ಯಯನಕ್ಕೆ ಸಹಕಾರಿಯಾಗುತ್ತದೆ ಎಂಬ ನಂಬಿಕೆಯಿಂದ ದೇಹದಾನ ಮಾಡಿರುವುದು ನಮಗೆ ಹೆಮ್ಮೆಯ ವಿಷಯ" ಎಂದು ತಿಳಿಸಿದರು.

ಇನ್ನೊಬ್ಬ ದೇಹದಾನಿ ಶ್ರೀ ಶಿವಕುಮಾರ ಎಚ್. ತಗಾರೆ ಮಾತನಾಡಿ, "ದಾನಗಳಲ್ಲಿ ಶ್ರೇಷ್ಠ ದಾನ ದೇಹದಾನ ಎಂಬ ವಿಶ್ವಾಸದಿಂದ ನಾನು, ನನ್ನ ಪತ್ನಿ ಹಾಗೂ ತಾಯಿ ಸ್ವಯಂಪ್ರೇರಿತವಾಗಿ ದೇಹದಾನ ಮಾಡಲು ಮುಂದಾಗಿರುವುದು ಸಂತಸದ ಸಂಗತಿ" ಎಂದರು.

ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸಂದೀಪ ದೇಶಮುಖ ಅವರು ಮಾತನಾಡಿ, ಮರಣಾನಂತರ ದೇಹದಾನ ಮಾಡುವ ಮೂಲಕ ವೈದ್ಯಕೀಯ ಶಿಕ್ಷಣಕ್ಕೆ ಮಹತ್ವದ ಕೊಡುಗೆ ನೀಡಬಹುದು. ಸಾರ್ವಜನಿಕರು ಸ್ವಯಂ ಇಚ್ಛೆಯಿಂದ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ದೇಹದಾನ ಮಾಡಲು ಮುಂದಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅನಾಟಮಿ ವಿಭಾಗದ ಪ್ರಾಧ್ಯಾಪಕರಾದ ಡಾ. ಡಿ.ಬಿ. ಪಾಟೀಲ, ಡಾ. ವರುಷಾಲಿ, ಡಾ. ರೋಷನ್, ಸ್ನಾತಕೋತ್ತರ ವಿದ್ಯಾರ್ಥಿನಿ ಡಾ. ದಿವ್ಯಜ್ಯೋತಿ, ಟ್ಯೂಟರ್ಸ್, ದೇಹದಾನ ಸಂಚಾಲಕರಾದ ನಾಗೇಂದ್ರ ಕಮಲಾಪುರೆ, ಶಿವಪುತ್ರ ಮುತ್ತತ್ತಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಲೋಕ ಕಲ್ಯಾಣಕ್ಕಾಗಿ ಡೋಣಗಾಂವದಿಂದ ಮೈಲಾಪುರವರೆಗೆ ಪಾದಯಾತ್ರೆ

**ಚಿತ್ತಾಪುರ;ಜ.14–** ತಾಲೂಕಿನ ಡೋಣಗಾಂವ ಗ್ರಾಮದಿಂದ ಯಾದಗಿರಿ ಜಿಲ್ಲೆಯ ಮೈಲಾಪುರ ಗ್ರಾಮದ ಮೈಲಾರಲಿಂಗೇಶ್ವರ ದೇವಸ್ಥಾನದವರೆಗೆ ಲೋಕ ಕಲ್ಯಾಣಕ್ಕಾಗಿ 10ನೇ ವರ್ಷದ ಪಾದಯಾತ್ರೆಯನ್ನು ಗ್ರಾಮದ ಯುವ ಮುಖಂಡರು ಹಮ್ಮಿಕೊಂಡರು.

ನಂತರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಸದಸ್ಯ ಶರಣು ಡೋಣಗಾಂವ ಮಾತನಾಡಿ,

ಪ್ರತಿ ವರ್ಷವಂತೆ ಈ ವರ್ಷವೂ ಕೂಡ ಲೋಕ ಕಲ್ಯಾಣಕ್ಕಾಗಿ 10ನೇ ವರ್ಷದ ಡೋಣಗಾಂವ ಗ್ರಾಮದಿಂದ ಮೈಲಾಪುರ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಈ ಪಾದಯಾತ್ರೆಯಲ್ಲಿ ಬಂದ ಯಾತ್ರಿಕರಿಗೆ ವಸತಿ, ಪ್ರಸಾದ ವ್ಯವಸ್ಥೆ ಇರುತ್ತದೆ, ಮರಳಿ ಗ್ರಾಮಕ್ಕೆ ಬರುವುದಕ್ಕಾಗಿ ವಾಹನದ ವ್ಯವಸ್ಥೆ ಇರುತ್ತದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಗ್ರಾಮದ ಹಿರಿಯ ಮುಖಂಡರು ಯುವ ಮುಖಂಡರಿಗೆ ಸನ್ಮಾನಿಸಿ ಗೌರವಿಸಿದರು.



ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ್ ಹೊನ್ನಪುರ್, ಕಾಶಪ್ಪ ಹಲಕಟ್ಟಿ, ಶಿವಯ್ಯ ಸ್ವಾಮಿ, ಅಂಬರೀಷ್ ಬಾನರ್, ಸಿದ್ದು ಮೆಂಗನೂರ್, ಶಿವರಾಜ್ ಬಾನರ್, ಶ್ರೀಶೈಲ್ ಪೂಜಾರಿ, ಮಂಜುನಾಥ್ ಚೂರಿ, ಶರಣಪ್ಪ ಪೂಜಾರಿ, ಈಶಪ್ಪ ಮುತ್ತಗಿ, ದೇವಪ್ಪ ನಂಜಳ್ಳಿ, ಜಟ್ಟೆಪ್ಪ ಪೂಜಾರಿ, ಹನುಮಂತ ಹಲ್ಕಟ್ಟಿ, ಶರಣಪ್ಪ ಮನೆಗರ್, ಮಂಜುನಾಥ್ ತಳವಾರ್, ಕಾಶಪ್ಪ ಜಿಂಗಲ್ ಸೇರಿದಂತೆ ಇತರರು ಇದ್ದರು.

# ವಿಧಾನ ಮಂಡಲದ ವಿಶೇಷ ಅಧಿವೇಶನ



**ಬೆಂಗಳೂರು, ಜ. 14–** ಮನರೇಗಾ ಬದಲಿಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚಿಸಲು ಈ ತಿಂಗಳ 27 ರಿಂದ ಮೂರು ದಿನಗಳ ವಿಧಾನಮಂಡಲದ ಅಧಿವೇಶನ ನಡೆಯಲಿದೆ.

ವಿಶೇಷ ಅಧಿವೇಶನಕ್ಕೆ ದಿನಾಂಕ ನಿಗದಿ ಮಾಡಲು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಚಿವ ಸಭಾ ಮಂದಿರದಲ್ಲಿ ನಡೆದ ಸಚಿವ ಸಂಪುಟದ ತುರ್ತು ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚಿಸಲು ವಿಧಾನಮಂಡಲದ ವಿಶೇಷ ಅಧಿವೇಶನ್ನು ಈ ತಿಂಗಳ 27 ರಿಂದ ಮೂರು ದಿನಗಳ ಕಾಲ ನಡೆಸುವ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಉನ್ನತ ಮೂಲಗಳು ಹೇಳಿವೆ.

ಈ ವಿಶೇಷ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ರದ್ದು ಮಾಡಿ ಮನರೇಗಾ ಕಾಯ್ದೆಯನ್ನೇ ಮರು ಸ್ಥಾಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ರಾಜ್ಯಸರ್ಕಾರ ಕೈಗೊಂಡಿದೆ.

ಕಳೆದ ವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ವಿರೋಧಿಸಿ ನಿರ್ಣಯವನ್ನು ಕೈಗೊಳ್ಳಲಾಗಿತ್ತು. ಅಲ್ಲದೆ, ಈ ಕಾಯ್ದೆ ವಿರುದ್ಧ ಕಾನೂನು ಹೋರಾಟ ನಡೆಸುವತೀರ್ಮಾನವನ್ನು ರಾಜ್ಯಸರ್ಕಾರ ಕೈಗೊಂಡಿತ್ತು. ಹಾಗೆಯೇ ಮನರೇಗಾ ಮತ್ತು ವಿಬಿಜಿ ರಾಮ್‌ಜಿ ಕಾಯ್ದೆಯ ಸಾಧಕ ಬಾಧಕಗಳ ಬಗ್ಗೆ ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯಬೇಕು ಎಂಬ ಚರ್ಚೆಗಳು ನಡೆದಿದ್ದವು. ಅದರಂತೆ ಇಂದು ನಡೆದ ಸಚಿವ ಸಂಪುಟದ ತುರ್ತು ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆಚರ್ಚಿಸಲುಈ ತಿಂಗಳ 27 ರಿಂದ 3 ದಿನಗಳ ಕಾಲ ವಿಧಾನಮಂಡಲದ ಅಧಿವೇಶನವನ್ನು ಕರೆಯುವ ತೀರ್ಮಾನವನ್ನು ಕೈಗೊಳ್ಳಲಾಗಿದೆ.

ಮನರೇಗಾ ಯೋಜನೆಯನ್ನು ಬದಲಿಸಿ ವಿಬಿಜಿ ರಾಮ್‌ಜಿ ಕಾಯ್ದೆ ಜಾರಿ ಮಾಡಿರುವುದಕ್ಕೆ ಪ್ರಬಲ ವಿರೋಧ ವ್ಯಕ್ತಪಡಿಸಿರುವ ಕಾಂಗ್ರೆಸ್ ಪಕ್ಷ ರಾಷ್ಟ್ರಾದ್ಯಾಂತ ಈ ಬಗ್ಗೆ ಹೋರಾಟಕ್ಕೆ ಮುಂದಾಗಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರ ವಿಬಿಜಿ ರಾಮ್‌ಜಿ ಕಾಯ್ದೆ ವಿರುದ್ಧ ಸಮರ ಸಾರಿದ್ದು, ರಾಜ್ಯದಲ್ಲೂ ಮನರೇಗಾ ಬಚಾವ್ ಸಂಗ್ರಾಮವನ್ನು ನಡೆಸಲು ಮುಂದಾಗಿದೆ. ಜತೆಗೆ ಮನರೇಗಾ ಯೋಜನೆಯನ್ನು ರದ್ದು ಮಾಡಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ತಂದಿರುವ ಬಗ್ಗೆ ಕಾನೂನು ಹೋರಾಟಕ್ಕೂ ತೀರ್ಮಾನ ಮಾಡಿದೆ.ಈಗ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ರದ್ದುಗೊಳಿಸಿ ಮೊದಲಿನಂತೆಮನರೇಗಾ ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸುವ ನಿರ್ಣಯ ಕೈಗೊಳ್ಳಲಾಗಿದ್ದು, ವಿಬಿಜಿ ರಾಮ್‌ಜಿ ಸಮರ ಅಧಿವೇಶನವನ್ನು ಕಾವೇರಿಸುವುದು ನಿಶ್ಚಿತ.

ಮೊದಲ ದಿನ ರಾಜ್ಯಪಾಲರ ಭಾಷಣ ನಂತರ ಕಾಯ್ದೆ ಬಗ್ಗೆ ಚರ್ಚೆ

ವರ್ಷದ ಮೊದಲ ವಿಧಾನಮಂಡಲದ ಅಧಿವೇಶನವು ರಾಜ್ಯಪಾಲರ ಭಾಷಣದೊಂದಿಗೆ ಜಂಟಿ ಅಧಿವೇಶನ ನಡೆಸಬೇಕಾಗುತ್ತದೆ. ಹಾಗಾಗಿ ವಿಬಿಜಿ ರಾಮ್‌ಜಿ ಕಾಯ್ದೆ ಕುರಿತು ಚರ್ಚೆಗೆ ಕರೆಯಲಾಗುವ ವಿಶೇಷ ಅಧಿವೇಶನದ ಮೊದಲ ದಿನ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ಭಾಷಣ ಮಾಡುವರು. ಅವರ ಭಾಷಣನಂತರ ಸದನವನ್ನು ಜ. 28ಕ್ಕೆ ಮುಂದೂಡಲಾಗುತ್ತದೆ. ಜ. 28 ಮತ್ತು 29 ರಂದು ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚೆ, ಖಂಡನಾ ನಿರ್ಣಯಗಳನ್ನು ಕೈಗೊಳ್ಳಲಾಗುತ್ತದೆ.

ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆ ಬರುವ ಮಾರ್ಚ್‌ನಲ್ಲಿ ನಡೆಯುವ ಬಜೆಟ್ ಅಧಿವೇಶನದಲ್ಲಿ ನಡೆಸಲಾಗುತ್ತದೆ ಎಂದು ಮೂಲಗಳು ಹೇಳಿವೆ.

# 20 ವರ್ಷ ನಂತರ ದಸೂರು ಗ್ರಾಮಕ್ಕೆ ಡಾಂಬರೀಕರಣ ಭಾಗ್ಯ



**ಚಡಚಣ,ಜ.14–** ವಿಜಯಪುರ ಜಿಲ್ಲೆ ಚಡಚಣ ತಾಲೂಕಿನ ದಸೂರು ಗ್ರಾಮಕ್ಕೆ 20 ವರ್ಷಗಳ ನಂತರ ಡಾಂಬರೀಕರಣ ಭಾಗ್ಯ ಲಭಿಸಿದೆ.

ಹೊಸ ದಸೂರ ದಿಂದ ಉಮರಜ ಕ್ರಾಸ್ ವರೆಗೆ ರಸ್ತೆ ಡಾಂಬರೀಕರಣ ಸುಮಾರು 2 ಕೋಟಿ ಮೊತ್ತದ ರಸ್ತೆ ಭೂಮಿ ಪೂಜೆ ಶಾಸಕರಾದ ವಿಠ್ಠಲ ಕಟಕದೋಂಡ ನೆರವೇರಿಸಿದರು. ವಿಶೇಷವೆಂದರೆ ಈ ಗ್ರಾಮಕ್ಕೆ ಸುಮಾರು 20 ವರ್ಷದಿಂದ ಯಾವುದೇ ರಸ್ತೆ ಭೂಮಿ ಪೂಜೆ ಮತ್ತು ಯಾವುದೇ ರಸ್ತೆ ಆಗಿಲ್ಲ. 20 ವರ್ಷದ ನಂತರ ಈಗ ಈ ಗ್ರಾಮಕ್ಕೆ ಶಾಸಕರಿಂದ ಪೂಜೆ ನಡಿತಾ ಇದೆ ಎಂದು ಜನರಲ್ಲಿ ಮಂದಹಾಸ ಮೂಡಿತು. ಈ ಸಂದರ್ಭದಲ್ಲಿ ಸ್ಥಳೀಯರಾದ ವಿದ್ಯಾ ಮೂರ್ತಿ ಮಠಪತಿ ಗುರುಗಳು ಮತ್ತು ಗ್ಯಾರಂಟಿ ಯೋಜನೆ ಅಧ್ಯಕ್ಷ ರವಿದಾಸ್ ಜಾದವ್ ಮತ್ತು ಪಂಚಾಯತಿ ಅಧ್ಯಕ್ಷರಾದ ಕೈಸಾನ್ ಸಾವಾಳೆ ಮತ್ತು ಸದಸ್ಯರಾದ ಅಮಸಿದ್ ಬಿಜ್ಜರಗಿ ಮಾರುತಿ ವಾಲೀಕಾರ ಅಬ್ದುಲ್ ಮುಲ್ಲಾ ರೇವಪ್ಪ ನಂದರಗಿ ಮತ್ತು ಗ್ರಾಮಸ್ಥರು ಇದ್ದರು

# ವಲಸೆ ಯಾತ್ರಿ ನಿರ್ಮೂಲನೆ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮಗಳಲ್ಲಿ ಉದ್ಯೋಗ: ಆಸ್ರ ಜಬೀನಾ ಖಾನಂ

ಯುವಮಾರ್ಗ ಸುದ್ದಿ



**ಮಾನ್ವಿ,ಜ.14–** ತಾಲೂಕಿನ ಸಂಗಾಪೂರ ಗ್ರಾಮದಲ್ಲಿ ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ನಡೆದ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಗ್ರಾ.ಪಂ.ಅಬಿವೃದ್ಧಿ ಅಧಿಕಾರಿ ಆಸ್ರ ಜಬೀನಾ ಖಾನಂ ಚಾಲನೆ ನೀಡಿ ಮಾತನಾಡಿ ಸರ್ಕಾರವು ಗ್ರಾಮ ಪಂಚಾಯಿತಿಗಳ ಮೂಲಕ ಗ್ರಾಮೀಣ ಭಾಗದ ಕೃಷಿ ಕೂಲಿಗಳು ಮಹಾನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸುವುದಕ್ಕಾಗಿ ವಲಸೆ ಯಾತ್ರಿ ನಿರ್ಮೂಲನೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿಯಲ್ಲಿ ತಮ್ಮ ಗ್ರಾಮದಲ್ಲಿಯೇ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬದವರು ಒಂದು ಆರ್ಥಿಕ ವರ್ಷದಲ್ಲಿ 100 ದಿನ ಕೆಲಸವನ್ನು ಪಡೆಯುವ ಮೂಲಕ ಗಂಡು ಮತ್ತು ಹೆಣ್ಣಿಗೆ ಸಮಾನವಾಗಿ ಪ್ರತಿ ದಿನಕ್ಕೆ 370 ರೂ ಕೂಲಿಯನ್ನು ನೀಡಲಾಗುವುದು ಅದರಂತೆ 37 ಸಾವಿರ ರೂ ಕೂಲಿಯನ್ನು ಪಡೆಯ ಬಹುದಾಗಿದೆ. ಹಾಗೂ ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆಯಡಿಯಲ್ಲಿ ಕೆಲಸದ ಸ್ಥಳದಲ್ಲಿ ಮೃತಪಟ್ಟಲ್ಲಿ ಕುಟುಂಬದ ಅವಲಂಭಿತರಿಗೆ 2ಲಕ್ಷ ವಿಮೆ ಪರಿಹಾರವನ್ನು ನೀಡಲಾಗುವುದು. ಸಾಮಾಜಿಕ ಭದ್ರತೆ ಕಲ್ಪಿಸಲು ನರೇಗ ಯೋಜನೆಯಡಿಯಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಕೇಲಸದಲ್ಲಿ ಶೇ 50ರಷ್ಟು ವಿನಾಯಿತಿ ದೊರೆಯುತ್ತದೆ.ಕೂಲಿ ಕಾರ್ಮಿಕರ 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳುವುದಕ್ಕೆ ಶಿಶು ಪಾಲನಾ ಕೇಂದ್ರದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ತಿಳಿಸಿದರು.

ಉಚಿತ ಆರೋಗ್ಯ ಶಿಬಿರದಲ್ಲಿ ಆರೋಗ್ಯ ಇಲಾಖೆಯ ಸಮುದಾಯ ಆರೋಗ್ಯ ಅಧಿಕಾರಿ ಸುಭಾನ್ ನರೇಗಾ ಕೂಲಿ ಕಾರ್ಮಿಕರಿಗೆ ರಕ್ತದೊತ್ತಡ,,ಮಧುಮೇಹ.ರಕ್ತದ ಕ್ಯಾನ್ಸರ್, ಕಫ,ಸೇರಿದಂತೆ ಅಗತ್ಯ ಆರೋಗ್ಯ ತಪಾಸಣೆ ನಡೆಸಿ ಔಷಾಧಿಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಸಮುದಾಯ ಸುರಕ್ಷ ಅಧಿಕಾರಿ ಯಲ್ಲಮ್ಮ , ತಾಲೂಕ ಐ.ಇ.ಸಿ. ಸಂಯೋಜಕರಾದ ಈರೇಶ್, ಆಶಾ ಕಾರ್ಯಕರ್ತೆಯರಾದ ಶ್ರೀ ದೇವಿ,ನೀಲಮ್ಮ ,ಕರಿಬಸಯ್ಯ ಡಿ.ಇ.ಒ. ,ರಾಯಪ್ಪ ಬಿ .ಎಫ್. ಟೀಗಳು ಹಾಗೂ ನರೇಗ ಕೂಲಿ ಕಾರ್ಮಿಕರು ಇದ್ದರು.

# ಬಿ.ವಿ.ಆರ್ ಇ–ಟೆಕ್ನೋ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮ

ಯುವಮಾರ್ಗ ಸುದ್ದಿ



**ಮಾನ್ವಿ,ಜ.14–** ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆಯಲ್ಲಿ ನಡೆದ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮಕ್ಕೆ ಬಿ.ವಿ.ಆರ್ ಇ–ಟೆಕ್ನೋ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ ಚಾಲನೆ ನೀಡಿ ಮಾತನಾಡಿ ನಮ್ಮ ದೇಶ ಹಬ್ಬಗಳ ದೇಶ ಪ್ರತಿ ಋತುವಿಗೂ ಕೂಡ ಒಂದು ಹಬ್ಬವನ್ನು ಹಿಂದೂಗಳು ಆಚರಿಸುವುದು ವಿಶೇಷವಾಗಿರುತ್ತದೆ ಶಾಲೆಯ ಮಕ್ಕಳಿಗೆ ನಮ್ಮ ಸಂಸ್ಕೃತಿ ಹಾಗೂ ಪರಂಪರೆ, ಹಬ್ಬಗಳ ಆಚರಣೆಯ ಹಿನ್ನೆಲೆ ಹಾಗೂ ಮಹಾತ್ವದ ಕುರಿತು ತಿಳಿಸುವ ಉದ್ದೇಶದಿಂದ ಶಾಲೆಯ ಮಕ್ಕಳ ಜೋತೆಯಲ್ಲಿ ಪಾಲಕರು ಒಳಗೊಂಡಂತೆ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಶಾಲೆಯ ಆವರಣದಲ್ಲಿ ಗ್ರಾಮೀಣ ಭಾಗದಲ್ಲಿನ ಸಾಂಕ್ರತಿ ಹಬ್ಬದ ಆಚರಣೆಯ ಸಡಗರವನ್ನು ಬಿಂಬಿಸುವ ಹಳ್ಳಿಯ ಸೊಬಗನ್ನು ಚಿತ್ರಿಸುವ ವಿವಿಧ ರೂಪಕಗಳು ಗಮನ ಸೇಳೆದವು ಶಾಲೆಯ ವಿದ್ಯಾರ್ಥಿಗಳು ಸಾಂಕ್ರತಿಯ ಹಬ್ಬದ ದಿನ ಹಳ್ಳಿಗಳಲ್ಲಿ ಬರುವ ಗಂಗೆ ಎತ್ತು ಆಡಿಸುವ ವೇಷ, ಹರಿದಾಸರ ವೇಷ, ಕುಸ್ತಿ ಪಟುಗಳ ವೇಷ, ಕೋಳಿ ಪಂದ್ಯ, ಉಸುಕಿನ ಚೀಲವನ್ನು ಎತ್ತುವ ಸ್ಪರ್ಧಿಗಳಂತೆ ವೇಷ ಹಾಕಿಕೊಂಡು ಗಮನ ಸೇಳೆದರು. ವಿದ್ಯಾರ್ಥಿಗಳಿಂದ ಸಂಕ್ರಾಂತಿ ಹಬ್ಬದ ಹಾಡುಗಳಿಗೆ ನೃತ್ಯ ಪ್ರದರ್ಶನ ನೀಡಿದರು ಶಾಲೆಯ ಶಿಕ್ಷಕರು ಹಾಗೂ ಪಾಲಕರು ಶಾಲೆಯ ಮಕ್ಕಳಿಗೆ ಸಂಕ್ರಾತಿ ಹಬ್ಬದ ವಿಶೇಷವಾದ ಹಣೆರೆಯುವ ಮೂಲಕ ಶುಭಾಕೋರಿದರು.

ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಪದ್ಮಾವತಿ, ಮುಖ್ಯಗುರು ಸರ್ ಮತ್ ಖಾನ್ , ವಿದ್ಯಾರ್ಥಿಗಳ ಪಾಲಕರಾದ ಪ್ರಿಯಾಂಕ ವೀರೇಶ, ಭಾರತಿ ಶರಣಪ್ಪ, ಕೆ .ಪೂಜಾಜಗನ್ನಾಥ, ಪೂಜಾ ವಿನೋದ,ಹಸೀನಾ ಮಹ್ಮದ್ ಬೇಗ್, ಈರಮ್ಮ ಉಮೇಶ ಕರಿ, ದೀಪಾ ವಿ. ಶ್ರೀನಿವಾಸ , ಸುನಿತಾ ಬಾಲಾಜಿ ಸಿಂಗ್, ಅಫ್ರಿನಾ ಬೇಪಾ, ಟಿ.ಕೆ. ಅನಿತಾ ರೆಡ್ಡಿ, ಟಿ.ಕೆ. ವೆಂಕಟೇಶ, ವೈಷ್ಣವಿ ವಿಜಯಕುಮಾರ , ಶರಣಮ್ಮ ಉಮಾಶಂಕರ,ಸುರೇಖಾ ಮಹೇಶ, ಶಿಕ್ಷಕಿಯರಾದ ಶಿಲ್ಪಾ, ಕೆ ಸುಧಾ, ವಿಜಯಾ , ಪೂಜಾ, ಸೌಮ್ಯಾ, ಉಷಾಶ್ರೀ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದರು.

# ಸಿದ್ಧರಾಮೇಶ್ವರರ ತತ್ವ ಆದರ್ಶಗಳು ಅಳವಡಿಕೊಳ್ಳಿ: ರಾಜಶೇಖರನಾಯಕ



ಯುವಮಾರ್ಗ ಸುದ್ದಿ

**ಅರಕೇರಾ,ಜ.14–**ಬೋವಿ ಜನಾಂಗದವರು ಆರ್ಥೀಕ ಶೈಕ್ಷಣ ಕವಾಗಿ ಸಾಮಾಜಿಕವಾಗಿ ಹಿಂದುಳಿದಿದೆ. ಎಲ್ಲಾರು ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿಸಿ ಉತ್ತಮ ಶಿಕ್ಷಣ ಕೊಡಿಸಿ ಶೈಕ್ಷಣ ಕವಾಗಿ ಮುಂದೆ ಬಂದು ಸರಕಾರದ ಸೌಲಭ್ಯಗಳನ್ನು ಪಡೆಯಬೇಕು ಹಾಗೂ ನಿಮ್ಮ ಸಮಾಜದಲ್ಲಿನ ಕಟ್ಟ ಕಡೆ ಇರುವ ವ್ಯಕ್ತಿಗೂ ಕೂಡಾ ಸೌಲಭ್ಯಗಳನ್ನು ಸಿಗುವಂತಾಗಬೇಕೆಂದು ರಾಜಶೇಖರನಾಯಕ ಮಾಜಿ ಅಧ್ಯಕ್ಷರು ಹಾಲಿ ನಿರ್ಧೇಶಕರು ಹೇಳಿದರು.

ಅವರು ಅರಕೇರಾ ಪಟ್ಟಣದಲ್ಲಿನ ಬೋವಿ(ವಡ್ಡರ) ಸಮಾಜ ಅರಕೇರಾ ತಾಲೂಕ ಘಟಕದವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ ಭಾವ ಚಿತ್ರವಿರುವ ನಾಮಫಲಕವನ್ನು ಉದ್ಘಾಟಿಸಿ ಮಾತನಾಡಿದ ಅವರು ನಿಮ್ಮ ಸಮಾಜದ ಧರ್ಮಗುರುಗಳಾದ ಶ್ರೀಸಿದ್ಧರಾಮೇಶ್ವರರ ಚಿತ್ರ ನಾಮಫಲಕವನ್ನು ಇಂದು ನಾಮಕರಣ ಆಗಿರುವದು ಸಂತೋಷದವಿಷಯ. ಶಿವಯೋಗಿ ಸಿದ್ಧರಾಮೇಶ್ವರರ ತತ್ವ ಸಿದ್ದಾಂತಗಳನ್ನು ಜೀವನದಲ್ಲಿ ಅನುಸರಿಸಿದಲ್ಲಿ ಆದರ್ಶ ಜೀವನ ನಡೆಸಲು ಸಾಧ್ಯವೆಂದರು. ಆದರೆ ಅವಸರದಲ್ಲಿ ನಾಮಫಲಕ ಅಳವಡಿಸಿದ್ದಿರಿ. ಇದನ್ನು ಉತ್ತಮವಾದ ಸ್ಥಳದಲ್ಲಿ ನಿರ್ಮಿಸಿ ಮೂರ್ತಿಮಾಡಿದರೆ ಒಳ್ಳೆಯದು ಇದಕ್ಕೆ ನಿಮ್ಮ ಸಮಾಜದ ಜೋತೆಯಲ್ಲಿ ನಾವೇಲ್ಲರೂ ಸಹಕಾರ ನೀಡುವುದಾಗಿ ಭಸರವಸೆ ನೀಡಿದರು.

ದೇಶ ಕಟ್ಟುವ ಕಾಯಕದಲ್ಲಿ ತೋಡಗಿಕೊಂಡಿರುವ ಬೋವಿ ಸಮಾಜಕ್ಕೆ ಮಂದಿರ ಕಟ್ಟುವ ಕಾಯಕದಲ್ಲಿಗುರುತಿಸಿಕೊಂಡಿರುವ ಬೋವಿ ಸಮಾಜ ಹೀಗೆ ಸಮುದಾಯದ ಪರ ಅನೇಕ ಸಮಾಜಿಕ ಸೇವೆ ಕಲ್ಲಿನಲ್ಲಿ ಹೂ ಅರಳಿಸುವ ,ಮಣ್ಣಿನಲ್ಲಿ ನಾಡನ್ನು ಕಟ್ಟುವ ಶ್ರಮಜೀವಿಗಳು ಬೋವಿ ಸಮಾಜದವರು ಎಂದರೆ ತಪ್ಪಲ್ಲ ಎಂದು ಬಿಜೆಪಿ ಹಿರಿಯ ಮುಖಂಡರಾದ ಕೆ,ಅನಂತ ರಾಜನಾಯಕ ಅಭಿಪ್ರಾಯಪಟ್ಟರು. ,ಬಸವರಾಜ ಪೂಜಾರಿ ವೆಂಕಟೇಶನಾಯಕದೊರೆ ಮಾತನಾಡಿದರು.ಶಿವಯೋಗಿ ಸಿದ್ಧರಾಮೇಶ್ವರ ಭಾವಚಿತ್ರಕ್ಕೆ ಮಹೇಶಸ್ವಾಮಿ ಮಠಪತಿಯವರು ಪೂಜೆಸಲ್ಲಿಸಿದರು.

ಸಂದರ್ಭದಲ್ಲಿಚನ್ನವೀರಯ್ಯಸ್ವಾಮಿಹಿ

ರೇಮಠ,ಬಸವರಾಜಪೂಜಾರಿ,ಕ ಭಗವಂತ್ರಾಯ ನಾಯಕ,ವೆಂಕಟೇಶನಾಯಕದೊರೆ, ಚಂದ್ರಶೇಖರ ಶೆಟ್ಟಿ,ಸಚಿನನಾಯಕ ಪೋಲಿಸ್ ಪಾಟೀಲ್ ಮಂಜುನಾಥಪೂಜಾರಿ, ರಾಮನಗೌಡಕ್ವಾಟೆ ದೊರೆ, ರವಿನಾಯಕ, ಬಾಷವೈಲ್ಡಿಂಗ್,ಸಿದ್ದಪ್ಪಕಾರ. ಹನುಮಂತ್ರಾಯ ನಾಯಕ ಕೊತ್ತದೊಡ್ಡಿ,ಹನುಮಯ್ಯ ಗಾಲಿ, ಬೂದೇಪ್ಪಪರಸಲ್,ದೇವಪ್ಪ ಸಾತಲ್, ಮಲ್ಲಪ್ಪಕಬ್ಬೇರ, ರಂಗಣ್ಣಗಾಲಿ, ರವಿಕುಮಾರ ಪತ್ತಾರ, ವಿಶ್ವನಾಥಪತ್ತಾರ, ಗ್ರಾಮ ಪಂಚಾಯತ ಸರ್ವಸದಸ್ಯರುಗಳು ಬೋವಿಸಮಾಜದ ಮುಖಂಡರಾದ ಸಂತೋಷಭಂಗಿ, ಅಮರೇಶಭಂಗಿ,ಹನುಮಂತಕೋರಗೇರಿ,ವೀರೇಶ ಮ್ಯಾಕಲ್, ನಾಗ ರಾಜ ಮ್ಯಾಕಲ್, ಹನಮೇಶದಿನಸವರಿ,ರಮೇಶಭಂಗಿ, ಮುದಕಪ್ಪಕೊಕ್ಕಲ್, ತಿಮ್ಮಣ್ಣಹುಲಿಗುಡ್ಡ, ಬಸವಕಾರಬಾರಿ,ರಮೇಶದಿನಸವರಿ, ಚನ್ನಬಸವ ಭಂಗಿ, ಯಲ್ಲಪ್ಪ ದಿನಸವಾರಿ, ಸುರೇಶ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು

# ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ನಡೆಸಿ:ಪ್ರವೀಣಕುಮಾರ್



ಯುವಮಾರ್ಗ ಸುದ್ದಿ

**ಮಾನ್ವಿ,ಜ.14–** ಪಟ್ಟಣದ ಪಟ್ಟಣದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು ಭಾರತ ರತ್ನ ಡಾ.ಎ. ಪಿ. ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ನಡೆದ ಎಸ್.ಎಸ್.ಎಲ್.ಸಿ ಹಾಗೂ ದ್ವಿತಿಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣಕುಮಾರ ಉದ್ಘಾಟಿಸಿ ಮಾತನಾಡಿ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಮಹಾತ್ವ ನೀಡುತ್ತಿದ್ದು ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ವಸತಿಯುತವಾಗಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದು ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ನಡೆಸುವ ಮೂಲಕ ಹೆಚ್ಚಿನ ಅಂಕಗಳನ್ನು ಪಡೆದು ವಸತಿ ನಿಲಯಕ್ಕೆ ಹಾಗೂ ತಮ್ಮ ಪಾಲಕರಿಗೆ ಗೌರವತನ್ನಿ ಹಾಗೂ ಉತ್ತಮವಾದ ಜೀವನವನ್ನು ರೂಪಿಸಿಕೊಳ್ಳಿ ಎಂದು ಕರೆ ನೀಡಿದರು.

ಹಿರಿಯ ಸಾಹಿತಿ ಹಾಗೂ ಉಪನ್ಯಾಸಕ ರಮೇಶಬಾಬು ಯಾಳಗಿ ಉಪನ್ಯಾಸ ನೀಡಿ ಎಸ್.ಎಸ್.ಎಲ್.ಸಿ ಹಾಗೂ ದ್ವಿತಿಯ ಪಿ.ಯು.ಸಿ ವಿದ್ಯಾರ್ಥಿಗಳು ಮುಂಬರುವ ವಾರ್ಷಿಕ ಪರೀಕ್ಷೆಯ ಬಗ್ಗೆ ಆತಂಕ, ಭಯಪಡದೆ ನಿಯಮಿತವಾಗಿ, ಶಿಸ್ತು ಬದ್ಧವಾಗಿ ಅಭ್ಯಾಸ ಮಾಡಿದರೆ ಖಂಡಿತವಾಗಿ ಪರೀಕ್ಷೆಯಲ್ಲಿ ಯಶಸ್ಸು ಪಡೆಯುವುದಕ್ಕೆ ಸಾಧ್ಯ ಕಠಿಣವಾದ ವಿಷಯಗಳಿಗೆ ಹೆಚ್ಚು ಸಮಯ ನಿಗದಿಪಡಿಸಿಕೊಳ್ಳಿ ಅರ್ಥವಾಗದ ಪ್ರಶ್ನೆಗಳಿಗೆ ಸಂಬಂಧಿಸಿದ ವಿಷಯದ ಶಿಕ್ಷಕರಲ್ಲಿ ಕೇಳಿ ಪರಿಹರಿಸಿಕೊಳ್ಳಿ. ಶಿಕ್ಷಣದೊಂದಿಗೆ ಸಂಸ್ಕಾರವೂ ಅಗತ್ಯವಿದೆ. ಹೆತ್ತವರನ್ನು,ಗುರು.ಹಿರಿಯರನ್ನು ಸದಾ ಗೌರವಿಸುವುದನ್ನು ಕಲಿತುಕೊಳ್ಳಿ ಎಂದು ತಿಳಿಸಿದರು.

2024–25 ನೇ ಸಾಲಿನಲ್ಲಿ ವಸತಿ ನಿಲಯದಲ್ಲಿ ಅಭ್ಯಾಸ ಮಾಡಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ ಶಂಕರ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ವಸತಿ ನಿಲಯದ ಪ್ರಾಚಾರ್ಯರಾದ ವೆಂಕಟೇಶ ನಾಯಕ , ಶಿಕ್ಷಕ ಪರುಶುರಾಮ ಯಲಗೋಡ, ಅಮರೇಶ ಸೇರಿದಂತೆ ವಸತಿ ನಿಲಯದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

# ಅಂಬಿಗರ ಚೌಡಯ್ಯ ಜಯಂತಿ ಆಚರಣೆಗೆ ಸಿದ್ಧತೆಯಾಗಲಿ



ಯುವಮಾರ್ಗ ಸುದ್ದಿ

**ರಾಯಚೂರು,ಜ.14–** ಜಿಲ್ಲಾಡಳಿತದಿಂದ ಜನವರಿ 21ರಂದು ಅಂಬಿಗರ ಚೌಡಯ್ಯ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳ ಕಚೇರಿಯ ತಹಶಿಲ್ದಾರ್ ಜಗದೀಶ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವರು ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಬಿಗರ ಚೌಡಯ್ಯ ಜಯಂತಿ ಆಚರಣೆಯ ಪೂರ್ವಭಾವಿ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಜ.21ರಂದು ಜಿಲ್ಲೆಯ ಎಲ್ಲ ತಾಲೂಕುಗಳು, ಶಾಲಾ–ಕಾಲೇಜುಗಳಲ್ಲಿ ಆಚರಿಸಲಾಗುವುದು. ವಿವಿಧ ಇಲಾಖೆಗಳು ಜಯಂತಿ ಆಚರಣೆಗೆ ಸಹಕಾರ ನೀಡುವ ಜತೆಗೆ ಅಚ್ಚುಕಟ್ಟಾದ ವ್ಯವಸ್ಥೆ ಮಾಡಬೇಕು. ಅಂದು ಬೆಳಗ್ಗೆ 09 ಗಂಟೆಗೆ ನಗರದ ಬಿ.ಆರ್.ಬಿ ಸರ್ಕಲ್ ನಿಂದ ಅಂಬಿಗರ ಚೌಡಯ್ಯ ಅವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. 11 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಇರಲಿದೆ ಎಂದರು.

ವೇದಿಕೆಯನ್ನು ಅಚ್ಚುಕಟ್ಟಾಗಿ ಅಂಲಕಾರ ಮಾಡಬೇಕು. ಗಣ್ಯರಿಗೆ ಆಮಂತ್ರಣ, ಪ್ರತಿಭಾನಿತ್ವರಿಗೆ ಸನ್ಮಾನ, ಉಪನ್ಯಾಸ ಸೇರಿದಂತೆ ಎಲ್ಲವೂ ಅಚ್ಚುಕಟ್ಟಾಗಿರಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉತ್ತರಾದೇವಿ, ಸಮುದಾಯದ ಜಿಲ್ಲಾಧ್ಯಕ್ಷ ಕೆ.ಶಾಂತಪ್ಪ, ಸಮಾಜದ ಮುಖಂಡರಾದ ಹೊನ್ನಪ್ಪ, ಶ್ರೀನಿವಾಸ್, ಪಿ.ಪರಮೇಶ್, ಕೆ.ತಿಮ್ಮಪ್ಪ, ಪಿ.ಈರೇಶ, ಈರೇಶ ಜಾಲಗೇರಿ, ಕೆ.ನರಸಿಂಹ, ಇ.ಶಿವರಾವ್, ಹನುಮಂತು ಕಡಗೋಳ ಸೇರಿದಂತೆ ಇತರರು ಇದ್ದರು.

# ಶಕ್ತಿನಗರ ವ್ಯಾಪ್ತಿಯಲ್ಲಿ ಜನವರಿ 17ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜ.14–** ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಶಕ್ತಿನಗರ ಉಪ ಕೇಂದ್ರದಲ್ಲಿ ನಿವೇದಿತಾ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜನವರಿ 17ರ ಬೆಳಿಗ್ಗೆ 9ಗಂಟೆಯಿಂದ ಸಂಜೆ 06 ಗಂಟೆವರೆಗೆ ವಿಶಾಲ್ ಕ್ರಾಸ್, ಎಂಪಿಸಿಎಲ್, ಯಾದವ್ ನಗರ, ಮುಖ್ಯದ್ವಾರ ಪ್ರದೇಶ, ರೆಡ್ಡಿ ನಗರ ಸೇರಿದಂತೆ ಸುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H